ವಿಶ್ವವಾಣಿ
ವಿಶ್ವಾಸವೇ ವಿಶ್ವ

ಮೂರನೇ ಬಾರಿ ರಣಜಿ ಗೆದ್ದ ವಿದರ್ಭ


ಚಿತ್ರ: ಸುಧಾಕರ್ ದೇವರಾಜ್

ಸೊಂಪಾದ ಪುಟಗಳು

ಡಿಕೆಶಿ ಅಂದ್ರೆ ಅಮಿತ್ ಶಾ ಅವರಿಗಿಷ್ಟ
ಮೂರ್ತಿಪೂಜೆ
ಆರ್.ಟಿ.ವಿಠ್ಠಲಮೂರ್ತಿ 6

ದುಡ್ಡೇ ದೊಡ್ಡಪ್ಪ; ಜಾಹೀರಾತು ಅದರಪ್ಪ!
ವಿದೇಶವಾಸಿ
ಕಿರಣ್ ಉಪಾಧ್ಯಾಯ ಬಹ್ರೈನ್ 7

ದಾರಿದೀಪೋಕ್ತಿ

ಎಷ್ಟೇ ನಿಧಾನವಾಗಿಯಾದರೂ ಪರವಾಗಿಲ್ಲ, ಯಾರಾದರೂ ನಡೆಯುತ್ತಿದ್ದಾರೆ ಅಂದ್ರೆ ಅವರು ತಡವಾಗಿಯಾದರೂ ಗುರಿ ತಲುಪುತ್ತಾರೆ. ಕೆಲವು ಸಲ ಜೀವನದಲ್ಲಿ ವೇಗಕ್ಕಿಂತ ಕ್ರಿಯೆ ಮುಖ್ಯ.

ವಕ್ರತುಂಡೋಕ್ತಿ

ಕೆಲವು ಸಲ ನಮ್ಮ ಪಾಲಿಗೆ ಜೀವನ ಸೂಪ್ ಆಗಿದೆ ಎಂದು ಸಮಾಧಾನಪಡುತ್ತೇವೆ. ಆದರೆ ಆಗ ನಾವು ಫೋರ್ಕ್ ಆಗಿರುತ್ತೇವೆ.

ಜಂಟಿ ಸದನ ಉದ್ದೇಶಿಸಿ ಬೆಳಗ್ಗೆ ರಾಜ್ಯಪಾಲರ ಭಾಷಣ, ಆಡಳಿತ ಪಕ್ಷ, ಪ್ರತಿಪಕ್ಷ ಮುಖಾಮುಖಿಗೆ ಸಜ್ಜು, ಮಾರ್ಚ್ 7ಕ್ಕೆ ಬಜೆಟ್ ಮಂಡನೆ

ಇಂದಿನಿಂದ ಬಜೆಟ್ ಅಧಿವೇಶನ ಆರಂಭ

ವಿಶ್ವವಾಣಿ ಸುದ್ದಿಮನೆ

ಬೆಂಗಳೂರು: ವಿಧಾನ ಮಂಡಲದ ಜಂಟಿ ಸದನಗಳನ್ನು ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಥ್ ಭಾಷಣ ಮಾಡುವ ಮೂಲಕ 2025ನೇ ಸಾಲಿನ ಮುಂಗಡಪತ್ರ ಅಧಿವೇಶನಕ್ಕೆ ಸೋಮವಾರ ಚಾಲನೆ ಸಿಗಲಿದೆ.

ಸೋಮವಾರ ಉಭಯ ಸದನಗಳ ಕಲಾಪ ರಾಜ್ಯಪಾಲರ ಭಾಷಣ ಹಾಗೂ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸುವ ನಿರ್ಣಯಕ್ಕೆ ಸೀಮಿತವಾಗಲಿದ್ದು ಮಂಗಳವಾರದಿಂದ ಆಡಳಿತ-ಪ್ರತಿಪಕ್ಷಗಳ ನಡುವೆ ವಾಕ್ಸಮರ ನಡೆಸುವ ಸಾಧ್ಯತೆಯಿದೆ. ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ 16ನೇ ಬಜೆಟ್ ಅನ್ನು ಮಂಡಿಸಲಿದ್ದಾರೆ.

ಪ್ರಮುಖವಾಗಿ ಬೆಲೆ ಏರಿಕೆ, ಗ್ಯಾರಂಟಿ ಯೋಜನೆಯ ಹಣ ಬಿಡುಗಡೆಯಲ್ಲಿ ವಿಳಂಬ ಸೇರಿದಂತೆ ವಿವಿಧ ವಿಷಯಗಳನ್ನು ಮುಂದಿಟ್ಟುಕೊಂಡು ಸರಕಾರದ ವಿರುದ್ಧ ವಾಕ್ಸಮರ ನಡೆಸಲು ಪ್ರತಿಪಕ್ಷಗಳು ಸಜ್ಜಾಗಿದ್ದರೆ, ಕೋವಿಡ್ ಹಗರಣ, ಕೇಂದ್ರದಿಂದ ಸಿಗದ ಅನುದಾನ ಸೇರಿದಂತೆ ವಿವಿಧ ವಿಷಯಗಳು ಆಡಳಿತ ಪಕ್ಷದ ಬತ್ತಳಿಕೆಯಲ್ಲಿವೆ. ಇದರೊಂದಿಗೆ ಕಳೆದ ಅಧಿವೇಶನದ ಅವಧಿಯಲ್ಲಿ ಸಿ.ಟಿ.ರವಿ-ಲಕ್ಷ್ಮೀ ಹೆಬ್ಬಾಳ್ಕರ್ ನಡುವಿನ 'ಅಶ್ಲೀಲ ಪದ' ಬಳಕೆಯ ಫೈಟ್ ವಿಧಾನಪರಿಷತ್‌ನಲ್ಲಿ ಮತ್ತೆ ಮುಂದುವರೆಯುವ ಸಾಧ್ಯತೆಯಿದೆ. ಸಭಾಪತಿ ಈ ವಿವಾದವನ್ನು ಸೌಹಾರ್ದದಿಂದ ಮುಗಿಸುವ ಇಂಗಿತ ವ್ಯಕ್ತಪಡಿಸಿದದ್ದರೂ, ಆಡಳಿತ ಪಕ್ಷದಿಂದ ಇದಕ್ಕೆ ಪೂರಕ ಸ್ಪಂದನೆ ಸಿಕ್ಕಿಲ್ಲ. → 4

ಅಧಿವೇಶನಕ್ಕೆ ಮುನ್ನಾ ದಿನ ವಿಧಾನಸೌಧ ಮೊದಲ ಮಹಡಿಯನ್ನು ಕಂಡು ಸಂಭ್ರಮಿಸಿದ ಜನತೆ.

ಕೇಂದ್ರ ನಡೆ ವಿರುದ್ಧ ಟೀಕೆ?

ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿರುವ ರಾಜ್ಯಪಾಲರ ಭಾಷಣದಲ್ಲಿ ಕೇಂದ್ರ ಬಜೆಟ್‌ನಲ್ಲಿ ರಾಜ್ಯಕ್ಕೆ ಆಗಿರುವ ಅನ್ಯಾಯಗಳನ್ನು ಪ್ರಸ್ತಾಪಿಸುವ ಸಾಧ್ಯತೆಯಿದೆ. ಗ್ಯಾರಂಟಿ ಯೋಜನೆಗಳನ್ನು ಸಮರ್ಥಿಸಿಕೊಳ್ಳುವ ಅಂಶಗಳನ್ನು ಭಾಷಣದಲ್ಲಿ ಸೇರಿಸುವ ಮೂಲಕ, ಪ್ರತಿಪಕ್ಷ ಬಿಜೆಪಿಗೆ ಟಾಂಗ್ ಕೊಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಇದಕ್ಕೆ ಎದುರಾಗಿ ಪ್ರತಿಭಟನೆ ನಡೆಸಲು ಬಿಜೆಪಿ ಮುಂದಾಗಿದೆ.

ಫೈನಾನ್ಸ್ ವಿಧೇಯಕ ಮಂಡನೆಗೆ ಸಿದ್ಧ

ಸುಗ್ರೀವಾಜ್ಞೆ ಮೂಲಕ ಜಾರಿಗೊಂಡಿರುವ ಮೈಕ್ರೋ ಫೈನಾನ್ಸ್ ವಿಧೇಯಕ, ಬೆಂಗಳೂರು ಮಹಾನಗರ ಪಾಲಿಕೆಯನ್ನು ವಿಭಜಿಸುವ ಗ್ರೇಟರ್ ಬೆಂಗಳೂರು ವಿಧೇಯಕ ಸೇರಿದಂತೆ ಹಲವು ವಿಧೇಯಕಗಳು ಬಜೆಟ್ ಅಧಿವೇಶನದಲ್ಲಿ ಮಂಡನೆಯಾಗಲಿವೆ. ಇದರ ಜತೆಗೆ ರಾಜ್ಯಪಾಲರು ವಾಪಸ್ ಕಳುಹಿಸಿರುವ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ವಿಧೇಯಕ, ಸಹಕಾರ ಸಂಘಗಳ ವಿಧೇಯಕ ಸೇರಿದಂತೆ ಕೆಲ ವಿಧೇಯಕಗಳನ್ನು ಮರು ಮಂಡನೆ ಮಾಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಸಿಟ್ಟಿಂಗ್ ಬಜೆಟ್

ಮಂಡಿ ಚಿಪ್ಪು ನೋವಿನಿಂದ ಬಳಲುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹೆಚ್ಚು ಹೊತ್ತು ನಿಲ್ಲುವುದಕ್ಕೆ ಈಗಲೂ ಸಮಸ್ಯೆಯಿರುವುದರಿಂದ ಇದೇ ಮೊದಲ ಬಾರಿಗೆ ಕುಳಿತು ಕೊಂಡೇ ಬಜೆಟ್ ಮಂಡಿಸಲಿದ್ದಾರೆ ಎನ್ನಲಾಗಿದೆ. ಇದರೊಂದಿಗೆ ಸಿಎಂ ಸಿದ್ದರಾಮಯ್ಯ ಅವರಿಗೆ ವಿಧಾನಸೌಧದಲ್ಲಿ ವಿಶೇಷ ರ‍್ಯಾಂಪ್ ಸಿದ್ಧಗೊಳ್ಳುತ್ತಿದೆ. ಕಳೆದ ಅನೇಕ ದಿನಗಳಿಂದ ಮಂಡಿ ಚಿಪ್ಪು ನೋವಿನಿಂದ ಬಳಲುತ್ತಿರುವ ಸಿದ್ದರಾಮಯ್ಯ ಅವರಿಗೆ ವೈದ್ಯರು ಆರು ವಾರಗಳ ವಿಶ್ರಾಂತಿಗೆ ಸೂಚಿಸಿದ್ದಾರೆ.

ವಿಧಾನಸೌಧದ ಮುಂದೆ ಕಳೆಗಟ್ಟಿದ ಅಕ್ಷರ ಜಾತ್ರೆ

ಪುಸ್ತಕ ಪ್ರಿಯರ ಬಲಪ್ರದರ್ಶನ

ಕೊನೆಯ ದಿನ ಪುಸ್ತಕ ಮೇಳಕ್ಕೆ ಜನಸಾಗರ, ವಿಧಾನಸೌಧದಲ್ಲಿ ಹೊಸ ಕಲರವ

- ಸಹಸ್ರೋಪಾದಿಯಲ್ಲಿ ಪುಸ್ತಕ ಮೇಳಕ್ಕೆ ಆಗಮಿಸಿದ ಸಾರ್ವಜನಿಕರು
- ಪುಸ್ತಕ ಮೇಳ ವೀಕ್ಷಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಥ್
- ವಿಧಾನಸೌಧದ ಒಳಹೊಕ್ಕು ಸಂಭ್ರಮಿಸಿದ ಸಾರ್ವಜನಿಕರು

ಬೆಂಗಳೂರು: ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರ ವಿಶೇಷ ಆಸಕ್ತಿಯಿಂದ ಇದೇ ಮೊದಲ ಬಾರಿಗೆ ವಿಧಾನ ಸೌಧದ ಆವರಣದಲ್ಲಿ ಆಯೋಜಿಸಿದ್ದ ಪುಸ್ತಕದ ಮೇಳ ನಿರೀಕ್ಷೆಗೂ ಮೀರಿ ಯಶಸ್ವಿಯಾಗಿದ್ದು, ಭಾನುವಾರ ಹಿಂದೆಂದೂ ಕಾಣದ ಜನಸಾಗರಕ್ಕೆ ಶಕ್ತಿಸೌಧ ಸಾಕ್ಷಿಯಾಯಿತು.

ಐದು ದಿನಗಳ ಪುಸ್ತಕ ಮೇಳ ಸೋಮವಾರ ಕೊನೆಯಾದರೂ, ಸಾರ್ವಜನಿಕ ವೀಕ್ಷಣೆಗೆ ಭಾನುವಾರ ಅಂತಿಮ ದಿನವಾಗಿತ್ತು. ಇದರೊಂದಿಗೆ ವಿಧಾನಸಭೆಯ ಮೊದಲ ಮಹಡಿಯನ್ನು ವೀಕ್ಷಿಸಲು ಸಾರ್ವಜನಿಕರಿಗೆ ಅವಕಾಶ ನೀಡಿದ್ದರಿಂದ, ಸಾವಿರಾರು ಸಂಖ್ಯೆಯಲ್ಲಿ ಜನರು ವಿಧಾನಸೌಧ ಪ್ರವೇಶಿಸಲು ಮುಗಿಬಿದ್ದರು. ಇದರಿಂದ ಭಾರಿ ಜನದಟ್ಟಣೆ ಉಂಟಾದರೂ, ಎಲ್ಲರಿಗೂ ವಿಧಾನಸಭೆಯನ್ನು ವೀಕ್ಷಿಸಲು ಸಚಿವಾಲಯ ಅವಕಾಶ ನೀಡಿದ್ದು ಸಾರ್ವಜನಿಕ ಪ್ರಶಂಸೆಗೆ ಕಾರಣವಾಯಿತು. ಪುಸ್ತಕ ಪ್ರಿಯರು ಪುಸ್ತಕ ಮೇಳದಲ್ಲಿ ತಮಗೆ ಬೇಕಾದ ಪುಸ್ತಕಗಳನ್ನು ಖರೀದಿಸಿ ಖುಷಿಪಟ್ಟರೆ, ಕುಟುಂಬಸ್ಥರು, ಪ್ರವಾಸಿಗರು ಇದೇ ಮೊದಲ ಬಾರಿಗೆ ಅಮೃತ ಶಿಲೆಯಲ್ಲಿ ಕಟ್ಟಿದ ವಿಧಾನಸೌಧದ ಸೌಂದರ್ಯವನ್ನು ಹತ್ತಿರದಿಂದ ಕಂಡು ಸಂಭ್ರಮಿಸಿದರು. ಯುವ ಜೋಡಿಗಳು ಸೆಲ್ಫಿ ತೆಗೆದುಕೊಂಡು ಖುಷಿಪಟ್ಟರು. ಆದರೆ ನಿರೀಕ್ಷೆಗೂ ಮೀರಿದ ಜನಸಾಗರವನ್ನು ನಿಯಂತ್ರಿಸಲು ಭದ್ರತಾ ಸಿಬ್ಬಂದಿ ಹರಸಾಹಸಪಟ್ಟರು. ವರದಿ ಪುಟ → 3

ಉಕ್ರೇನ್‌ಗೆ ಬ್ರಿಟನ್ ಬೆಂಬಲ ಅಮೆರಿಕಕ್ಕೆ ಟಾಂಗ್

ಲಂಡನ್: ಅಮೆರಿಕ ಜತೆಗಿನ ದ್ವಿಪಕ್ಷೀಯ ಸಂಬಂಧ ಹಳಸಿದ ಬೆನ್ನಲ್ಲೇ ಉಕ್ರೇನ್ ನೆರವಿಗೆ ಧಾವಿಸಿರುವ ಬ್ರಿಟನ್, 226 ಕೋಟಿ ಪೌಂಡ್ ಸಾಲ ನೀಡುವ ಐತಿಹಾಸಿಕ ಒಪ್ಪಂದಕ್ಕೆ ಸಹಿ ಮಾಡಿದೆ. ಅಮೆರಿಕ ನ್ಯಾಟೋ ಸಂಘಟನೆಯಿಂದ ಹೊರಬರಲು ಚಿಂತನೆ ನಡೆಸಿರುವಂತೆಯೇ, ಐರೋಪ್ಯ ರಾಷ್ಟ್ರಗಳು ದೊಡ್ಡಣ್ಣನ ವಿರುದ್ಧ ತಿರುಗಿ ಬೀಳಲು ಮುಂದಾಗಿರುವ ಸೂಚನೆ ಇದು ಎಂದು ವಿಶ್ಲೇಷಿಸಲಾಗಿದೆ. ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಮತ್ತು ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿ ಲಂಡನ್‌ನಲ್ಲಿ ಮಾತುಕತೆ ನಡೆಸುತ್ತಿದ್ದಂತೆಯೇ ವರ್ಚುವಲ್ ಸಮಾರಂಭದಲ್ಲಿ ಉಭಯ ದೇಶಗಳ ಹಣಕಾಸು ಸಚಿವರಾದ ರಚೆಲ್ ರೀವ್ ಮತ್ತು ಸೆರ್ಗೀ ಮರ್ಚೆಂಕೊ ಅವರು ಈ ಸಾಲ ಒಪ್ಪಂದವನ್ನು ಅಂತಿಮಗೊಳಿಸಿದರು.

ಮಾತಂದ್ರೆ ಮಾತು

ಸಿದ್ದರಾಮಯ್ಯನವರನ್ನು ನೋಡಿದರೆ ನಮಗೆ ಅಯ್ಯೋ ಪಾಪ ಅನಿಸುತ್ತೆ. ಗ್ಯಾರೆಂಟಿಗಳಿಂದ ತಮ್ಮ ಕೈ ತಾವೇ ಕಟ್ಟಿಹಾಕಿಕೊಂಡಿದ್ದಾರೆ. ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಸರಕಾರ ವಿದ್ಯುತ್ ಬಿಲ್ ಕೂಡ ಕಟ್ಟಲು ಸಾಧ್ಯವಿಲ್ಲದ ಪರಿಸ್ಥಿತಿಗೆ ಬಂದು ನಿಂತಿದೆ. ವಿವಿಧ ಇಲಾಖೆಗಳು 6,000 ಕೋಟಿ ರೂಪಾಯಿ ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿವೆ. ಇದು ಸರಕಾರದ ಆಡಳಿತ ವೈಖರಿಗೆ ಹಿಡಿದ ಕೈಗನ್ನಡಿ.

- ಬಿ ವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಫನ್‌ತರಂಗ

- ರಘುಪತಿ ಶೃಂಗೇರಿ -

ವಿಧಾನಸೌಧಕ್ಕೂ ಆಸ್ತಿ ತೆರಿಗೆ ಬಾಕಿ ನೋಟಿಸ್

ಬೆಂಗಳೂರು: ಆಸ್ತಿ ತೆರಿಗೆ ಮತ್ತು ವಿದ್ಯುತ್ ಬಿಲ್ ಪಾವತಿಸದೆ ಬಾಕಿ ಉಳಿಸಿಕೊಂಡಿರುವ ಸರಕಾರಿ ಕಟ್ಟಡಗಳಿಗೆ ಬಿಬಿಎಂಪಿ ನೋಟಿಸ್ ಜಾರಿ ಮಾಡಿದ್ದು, ವಿಧಾನಸೌಧ, ವಿಕಾಸ ಸೌಧ, ರಾಜಭವನ ಸೇರಿದಂತೆ 258 ಸರಕಾರಿ ಕಟ್ಟಡಗಳಿಗೆ ನೋಟಿಸ್ ನೀಡಲಾಗಿದೆ. ರಾಜ್ಯಾದ್ಯಂತ ಬಹುತೇಕ ಸರಕಾರಿ ಇಲಾಖೆಗಳು 8 ಸಾವಿರ ಕೋಟಿ ರು.ವಿದ್ಯುತ್ ಬಿಲ್ ಬಾಕಿಯುಳಿಸಿಕೊಂಡಿವೆ. ಕೆಲ ಕಟ್ಟಡಗಳು 17 ವರ್ಷಗಳಿಂದ ತೆರಿಗೆ ಬಾಕಿ ಉಳಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ ಆಯಾ ಇಲಾಖೆ ಮುಖ್ಯಸ್ಥರಿಗೆ ಪಾಲಿಕೆ ನೋಟಿಸ್ ನೀಡಿದೆ.

ಚುನಾವಣೆ ಸಮಯದಲ್ಲಿ ಎಚ್ಚೆತ್ತುಕೊಳ್ಳಬೇಡಿ: ಎಚ್‌ಡಿಕೆ ಎಚ್ಚರಿಕೆ, ಜಿಟಿಡಿ ಗೈರು

ಜೆಡಿಎಸ್ ಬಲವರ್ಧನೆಗೆ ಗೌಡರ ಪಣ

ಬೆಂಗಳೂರು: ಚುನಾವಣೆ ಬಂದಾಗ ಪಕ್ಷದ ಸಂಘಟನೆಯಲ್ಲಿ ತೊಡಗಿಸಿಕೊಳ್ಳುವ ಮೊದಲು ಈಗಿನಿಂದಲೇ ಪಕ್ಷದ ಸಂಘಟನೆಯಲ್ಲಿ ತೊಡಗಿಸಿಕೊಳ್ಳಿ. ಪಕ್ಷದ ಸದಸ್ಯತ್ವ, ಮುಂದಿನ ಸ್ಥಳೀಯ ಸಂಸ್ಥೆ ಚುನಾವಣೆಗೆ ಈಗಿನಿಂದಲೇ ತಯಾರಿ ಆರಂಭಿಸಿ ಎಂದು ಜೆಡಿಎಸ್ ನಾಯಕರಿಗೆ ದೇವೇಗೌಡರು, ಕೇಂದ್ರ ಸಚಿವ ಕುಮಾರಸ್ವಾಮಿ ಸೂಚನೆ ನೀಡಿದ್ದಾರೆ.

ಭಾನುವಾರ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಹಾಗೂ ಕೇಂದ್ರ ಸಚಿವ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ, ಪಕ್ಷದ ದ್ವೈವಾರ್ಷಿಕ ಚುನಾವಣೆ, ಸದಸ್ಯತ್ವ

ಅಭಿಯಾನ ಹಾಗೂ ಮುಂಬರುವ ತಾಲ್ಲೂಕು-ಜಿಲ್ಲಾ ಪಂಚಾಯಿತಿ ಚುನಾವಣೆ, ವಿಧಾನಮಂಡಲ ಕಲಾಪದಲ್ಲಿ ಅನುಸರಿಸಬೇಕಾದ ಕಾರ್ಯತಂತ್ರಕ್ಕೆ ಸಂಬಂಧಿಸಿದಂತೆ ಚರ್ಚಿಸಲಾಯಿತು. → 4

ನಾಯಕನಾಗುವ ಕನಸು ಕಟ್ಟಿಕೊಂಡರೆ ಸಾಲದು. ಅದಕ್ಕೆ ಮೂಲ ಬಂಡವಾಳ ಎಂದರೆ ಪಕ್ಷ ಸಂಘಟನೆ. ನಿಮ್ಮ ಕ್ಷೇತ್ರ, ಮತಗಟ್ಟೆ, ತಾಲೂಕು, ಜಿಲ್ಲಾ ಕೇಂದ್ರಗಳಲ್ಲಿ ಸಂಘಟನೆಯನ್ನು ಬಲವಾಗಿ ಕಟ್ಟಿ. ಸದಸ್ಯತ್ವ ಅಭಿಯಾನವನ್ನು ವೇಗವಾಗಿ ನಡೆಸಬೇಕು. ಲೋಕಸಭೆ, ವಿಧಾನಸಭೆ ಅಥವಾ ಇನ್ನಾವುದೇ ಚುನಾವಣೆ ಬಂದಾಗ ಎಚ್ಚೆತ್ತುಕೊಂಡರೆ ಉಪಯೋಗ ಇಲ್ಲ. ಈಗಲೇ ನಾವು ಸಂಘಟನೆಗೆ ಶಕ್ತಿ ತುಂಬಿ ಜನರ ಜತೆ ನಿಂತರೆ ಚುನಾವಣೆಯಲ್ಲಿ ಪ್ರಬಲ ಪೈಪೋಟಿ ನೀಡಬಹುದು. ಇಲ್ಲವಾದರೆ ನಮ್ಮ ಶ್ರಮ ವ್ಯರ್ಥವಾಗುತ್ತದೆ.

- ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವ

ಕೆರೆಗೆ ಹಾರಿ ಪಿಯು ವಿದ್ಯಾರ್ಥಿನಿ ಆತ್ಮಹತ್ಯೆ

ಮುಧೋಳ: ಪಿಯು ಪರೀಕ್ಷೆಯಲ್ಲಿ ನಕಲು ಮಾಡಿದ ಆರೋಪಕ್ಕೆ ಗುರಿಯಾದ ವಿದ್ಯಾರ್ಥಿನಿ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ನಡೆದಿದೆ. ಮುಧೋಳದ ಶಾರದಾ ಪಿಯು ಕಾಲೇಜು ವಿದ್ಯಾರ್ಥಿನಿ ತೇಜಸ್ವಿನಿ ದೊಡ್ಡಮನಿ (19) ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ. ತೇಜಸ್ವಿನಿ ನಕಲು ಮಾಡಿದ್ದಾಳೆಂದು ದೂರಿದ್ದ ಕಾಲೇಜು ಸಿಬ್ಬಂದಿ ಈ ಸಂಬಂಧ ಪೋಷಕರನ್ನು ಕರೆಸಿ ಬುದ್ಧಿವಾದ ಹೇಳಿದ್ದರು. ಪರೀಕ್ಷೆ ಮುಗಿಸಿ ವಿದ್ಯಾರ್ಥಿನಿ ಕಾಲೇಜಿನಿಂದ ಕೆರೆಯತ್ತ ಧಾವಿಸುವ ದೃಶ್ಯ ಸಿ.ಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಕಾಪು ಮಾರಿಗುಡಿ ಬ್ರಹ್ಮಕಳಶೋತ್ಸವದಲ್ಲಿ ಭಾಗಿ, ಬಿಜೆಪಿ ವಿರುದ್ಧ ಕಿಡಿ

ಕಾಂಗ್ರೆಸ್ ಒಗ್ಗಟ್ಟಿನ ಮನೆ: ಡಿಕೆಶಿ

ಬೆಂಗಳೂರು: ಬಿಜೆಪಿಯವರು ಮೊದಲು ತಮ್ಮ ಮನೆಯನ್ನು ಕ್ರಮವಾಗಿ ಇಟ್ಟುಕೊಳ್ಳುವುದನ್ನು ನೋಡಲಿ. ಕಾಂಗ್ರೆಸ್‌ನ ಕೆಲವು ಶಾಸಕರು ಹೇಳಿರುವಂತೆ ಹಲವಾರು ಬಿಜೆಪಿ ಶಾಸಕರು ನಮ್ಮೊಂದಿಗೆ ಸಂಪರ್ಕ ಸಾಧಿಸಲು ಪ್ರಯತ್ನಿಸುತ್ತಿದ್ದಾರೆ. ನಾನು ಆ ಬಗ್ಗೆ ಚರ್ಚಿಸಲು ಬಯಸುವುದಿಲ್ಲ. ಬಿಜೆಪಿ ಮುರಿದ ಮನೆಯಾಗಿದ್ದರೆ ಕಾಂಗ್ರೆಸ್ ಒಗ್ಗಟ್ಟಿನ ಮನೆ ಎಂದು ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದರು.

ಉಡುಪಿಯ ಜಿಲ್ಲೆಯ ಕಾಪು ಕ್ಷೇತ್ರದಲ್ಲಿ ಮಾರಿಯಮ್ಮ ದೇಗುಲದ ಬ್ರಹ್ಮಕಳಶೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಲು, ಇಲ್ಲಿನ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರು, ಮಹಾಶಿವರಾತ್ರಿ ದಿನ ಇಶಾ ಫೌಂಡೇಶನ್ ಕಾರ್ಯಕ್ರಮದಲ್ಲಿ ಸದ್ಗುರು ಜಗ್ಗಿ ವಾಸುದೇವ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಜತೆ ವೇದಿಕೆ ಹಂಚಿಕೊಂಡ ಬಗ್ಗೆ ಕೇಳಿಬಂದಿರುವ ಟೀಕೆಗಳಿಗೆ ಪ್ರತಿಕ್ರಿಯೆ ನೀಡಿದರು. ಸದ್ಗುರು ಕರ್ನಾಟಕದವರು. ಅವರು ಕಾವೇರಿ ನೀರಿನ ಕಾರಣಕ್ಕಾಗಿ ಹೋರಾಡುತ್ತಿದ್ದಾರೆ. ಅವರು ಮನೆಗೆ ಬಂದು ನನಗೆ ವೈಯಕ್ತಿಕವಾಗಿ ಆಹ್ವಾನ ನೀಡಿದರು. → 4

ಹಿಮಪಾತ ದುರಂತ: ಸಾವಿನ ಸಂಖ್ಯೆ 8ಕ್ಕೆ

ಚಮೋಲಿ: ಉತ್ತರಾಖಂಡದ ಚಮೋಲಿ ಜಿಲ್ಲೆಯ ಮಾನಾ ಗ್ರಾಮದ ಬಳಿಯ ಗಡಿ ರಸ್ತೆ ಸಂಸ್ಥೆ (ಬಿಆರ್‌ಒ) ಶಿಬಿರದಲ್ಲಿ ಭಾರಿ ಹಿಮಪಾತ ಸಂಭವಿಸಿ 54 ಕಾರ್ಮಿಕರು ಹಿಮದ ಕೆಳಗೆ ಹೂತು ಹೋಗಿದ್ದ ಪ್ರಕರಣದಲ್ಲಿ ರಕ್ಷಣಾ ತಂಡಗಳು ಅವರಲ್ಲಿ 46 ಕಾರ್ಮಿಕರನ್ನು ರಕ್ಷಿಸಿದ್ದರೂ, 8 ಕಾರ್ಮಿಕರು ದುರಂತದಲ್ಲಿ ಸಾವನ್ನಪ್ಪಿದ್ದಾರೆ. ಭಾನುವಾರ ಕೂಡ ಹುಡುಕಾಟ ಮುಂದುವರಿದಿತ್ತು. ಸುಧಾರಿತ ತಂತ್ರಜ್ಞಾನ ಮತ್ತು ವೈಮಾನಿಕ ಬೆಂಬಲವನ್ನು ಬಳಸಿಕೊಂಡು ಏಜೆನ್ಸಿಗಳು ಶವಗಳನ್ನು ಪತ್ತೆಹಚ್ಚಿದ್ದು, ಹಿಮಪಾತದಲ್ಲಿ ಸಾವನ್ನಪ್ಪಿದವರ ಸಂಖ್ಯೆ 8ಕ್ಕೆ ಏರಿಕೆಯಾಗಿದೆ.

ಕರ್ನಾಟಕ ಬಂದ್‌ಗೆ ನಮ್ಮ ಬೆಂಬಲ ಇಲ್ಲ ಎಂದ ಕರವೇ ಅಧ್ಯಕ್ಷ ನಾರಾಯಣ ಗೌಡ

ಬಂದ್ ಹೋರಾಟಗಾರರ ಕೊನೆಯ ಅಸ್ತ್ರ

ವಿಶ್ವವಾಣಿ ಸಂದರ್ಶನ: **ಚಿದಾನಂದ ರುದ್ರಾಪುರಮಠ**

ಯಾವುದೇ ಹೋರಾಟ ಗಳು ಹಂತ-ಹಂತವಾಗಿ ಹೋಗ ಬೇಕು. ಮಾತೆತ್ತಿದ ಕೂಡಲೇ ಬಂದ್‌ಗೆ ಕರೆ ನೀಡುವುದು ರಾಜ್ಯದ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆಯಲ್ಲ. ಆದ್ದರಿಂದ 'ಸನ್ಮಾನ್ಯ' ವಾಟಾಳ್ ನಾಗರಾಜ್ ಅವರು ಕರೆ ನೀಡಿರುವ ಬಂದ್‌ಗೆ ಕರ್ನಾಟಕ ರಕ್ಷಣಾ ವೇದಿಕೆ ಬೆಂಬಲವಿಲ್ಲವೆಂದು ಕರವೇ ರಾಜ್ಯಾಧ್ಯಕ್ಷ ನಾರಾಯಣ ಗೌಡ ಸ್ಪಷ್ಟಪಡಿಸಿದ್ದಾರೆ. 'ವಿಶ್ವವಾಣಿ'ಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಬೆಳಗಾವಿ ಗಲಾಟೆಯ ವಿಷಯಕ್ಕೆ ವಾಟಾಳ್ ನಾಗರಾಜ್ ಕರೆ ನೀಡಿರುವ ಕರ್ನಾಟಕ ಬಂದ್, ಅದಕ್ಕೆ ಕರವೇ ಬೆಂಬಲ ನೀಡದಿರುವ ಬಗ್ಗೆ, ಕೆಎಎಸ್ ಪರೀಕ್ಷೆ, ಬೆಳಗಾವಿ ಎಂಇಎಸ್ ಪುಂಡಾಟಿಕೆ, ರಾಜಕೀಯ ಪ್ರವೇಶ ಸೇರಿದಂತೆ ವಿವಿಧ ವಿಷಯಕ್ಕೆ ಸಂಬಂಧಿಸಿದಂತೆ ಮಾತನಾಡಿದ್ದಾರೆ.

ಸಂದರ್ಶನದ ಪೂರ್ಣಪಾಠಕ್ಕೆ **ವಿಶ್ವವಾಣಿ ಟಿವಿ** ನೋಡಿ

ಸನ್ಮಾನ್ಯ ವಾಟಾಳ್ ನಾಗರಾಜ್ ಅವರು ಹಿರಿಯರಿದ್ದಾರೆ, ಆದರೆ, ಅವರು ತೆಗೆದುಕೊಳ್ಳುವ ಅನೇಕ ನಿರ್ಧಾರಗಳು ಆತುರದ್ದಾಗಿರುತ್ತವೆ. ಮಾತೆತ್ತಿದರೆ ಬಂದ್‌ಗೆ ಏಕೆ ಕರೆ ನೀಡುತ್ತಾರೆ ಎನ್ನುವುದು ಗೊತ್ತಿಲ್ಲ. ಅದು ಅವರ ಪ್ರತಿಷ್ಠೆಯೋ ಅಥವಾ ಪ್ರಚಾರದ ಗೀಳೋ ಗೊತ್ತಿಲ್ಲ. ಈ ರೀತಿಯ ಬಂದ್‌ನಿಂದ ರಾಜ್ಯಕ್ಕೆ ನಷ್ಟವೇ ಹೊರತು, ಯಾವುದೇ ಲಾಭವಿಲ್ಲ. ಆದ್ದರಿಂದ ಈ ಬಂದ್‌ಗೆ ನಮ್ಮ ಬೆಂಬಲವಿಲ್ಲ.

- ಕೆ.ಎ. ನಾರಾಯಣಗೌಡ, ಅಧ್ಯಕ್ಷರು, ಕನ್ನಡ ರಕ್ಷಣಾ ವೇದಿಕೆ

ಗೌಡರು ಹೇಳಿದ್ದು

- ಕರ್ನಾಟಕಕ್ಕೆ ಬರುವ ಅನ್ಯ ರಾಜ್ಯದವರಿಂದ ಕನ್ನಡಿಗರಿಗೆ ಉದ್ಯೋಗ ಸಿಗುತ್ತಿಲ್ಲ
- ವಲಸಿಗರಿಗೆ ಕನ್ನಡ ಕಲಿಯ ಬೇಕೆನ್ನುವ ಕಾನೂನಿಲ್ಲ; ಅದಕ್ಕೆ ಕರುನಾಡಲ್ಲಿ ಹಿಂದಿ ವಿಜೃಂಭಿಸುತ್ತಿದೆ.
- ಕೆಪಿಎಸ್‌ಸಿಯಿಂದ 78 ಸಾವಿರ ಅಭ್ಯರ್ಥಿಗಳಿಗೆ ಸಮಸ್ಯೆಯಾಗಿದೆ, ಇವರಿಗೆ ನ್ಯಾಯ ಕೊಡಿಸಲು ನಮ್ಮ ಆದ್ಯತೆ
- ಜಾಗೃತಿ, ಮನವಿ, ಸ್ಪಂದನೆಯ ಬಳಿಕ ಬಂದ್ ಮಾಡಬೇಕು; ಬಂದ್ ಎನ್ನುವುದು ಮೊದಲ ಅಸ್ತ್ರವಾಗಬಾರದು.
- ನನ್ನ ಬಳಿ ರಾಜಕೀಯಕ್ಕೆ ಬರುವಷ್ಟು ದುಡ್ಡಿಲ್ಲ; ರಾಜ್ಯದಲ್ಲಿ ಪ್ರಾದೇಶಿಕ ಪಕ್ಷ ಬಂದರೆ ಯೋಚನೆ ಮಾಡಬಹುದು.

• ಬಂದ್‌ಗೆ ನಿಮ್ಮ ಬೆಂಬಲ ಏಕಿಲ್ಲ?

ಬಂದ್‌ನಿಂದ ರಾಜ್ಯ ಸರಕಾರದ ಬೊಕ್ಕಸಕ್ಕೆ ನಷ್ಟವೇ ಹೊರತು ಲಾಭವಿಲ್ಲ. ಆದ್ದರಿಂದ ರಾಜ್ಯದ ಹಿತದೃಷ್ಟಿಯಿಂದ ಬಂದ್‌ಗಳು ಹೋರಾಟಗಾರರ ಪ್ರತ್ಯಸ್ತ್ರ ಅಸ್ತ್ರವಾಗಿರಬಾರದು. ಆರಂಭದಲ್ಲಿ ಜನರನ್ನು ಜಾಗೃತಿಗೊಳಿಸಬೇಕು, ನಾಡಿಮಿಡಿತ ಅರಿಯಬೇಕು, ಸರಕಾರದ ಸ್ಪಂದನೆ ನೋಡಿ ಹೋರಾಟ ಮಾಡಬೇಕು. ಅದ್ಯಾವುದಕ್ಕೂ ಸ್ಪಂದನೆ ಸಿಗದಿದ್ದರೆ 'ಬಂದ್' ಕೊನೆಯ ಬ್ರಹ್ಮಾಸ್ತ್ರವಾಗಬೇಕು. ನಮ್ಮ ಪ್ರತಿಷ್ಠೆಗಾಗಿ ಮಾತಿಗೆ ಮುಂಚೆ ಬಂದ್ ಮಾಡುವುದು ಸರಿಯಲ್ಲ. ಕೆಪಿಎಸ್‌ಸಿ ಮಾಡಿರುವ ಎಡವಟ್ಟಿನಿಂದ ಅತಂತ್ರದಲ್ಲಿರುವ 76 ಸಾವಿರ ಅಭ್ಯರ್ಥಿಗಳ ಹಿತ ಕಾಪಾಡುವುದು ನಮ್ಮ ಮೊದಲ ಆದ್ಯತೆ ಆಗಿದೆ. ಅವರ ಪರವಾಗಿ ನಾವು ಹೊರಡಬೇಕಿದೆ. ಆದ್ದರಿಂದ ವಾಟಾಳ್ ನಾಗರಾಜ್ ಅವರು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ನಮ್ಮ ಬೆಂಬಲವಿಲ್ಲ.

• ಕೆಪಿಎಸ್‌ಸಿ ಸಮಸ್ಯೆ ಬಗ್ಗೆ ಏನು ಹೇಳುತ್ತೀರಾ?

ಕೆಪಿಎಸ್‌ಸಿ ಕರ್ಮಕಾಂಡವನ್ನು ಹಿಂದಿನಿಂದಲೂ ನೋಡಿಕೊಂಡು ಬಂದಿದ್ದೇವೆ. ಅದರಲ್ಲಿ ಯಾರ ಯಾರದು ಎಷ್ಟೆಷ್ಟು ಪಾಲು ಎಂಬುವುದು ಇಂದಿಗೂ ಅರ್ಥವಾಗಿಲ್ಲ. ಅಲ್ಲಿರುವುದು ಮಹಾನ್ ಭ್ರಷ್ಟರ ಕೂಟ. ಪ್ರಾಮಾಣಿಕವಾಗಿ ಓದಿದ ಅಭ್ಯರ್ಥಿಗಳ ಭವಿಷ್ಯದ ಬಗ್ಗೆ ಅವರಿಗೆ ಅರಿವಿಲ್ಲ. ಇಷ್ಟೆಲ್ಲಾ ಅವಾಂತರಗಳು ನಡೆಯುತ್ತಿದ್ದರೂ ಮುಖ್ಯಮಂತ್ರಿಗಳು ಮೌನವಾಗಿ ಕೂತಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರನ್ನು ಕನ್ನಡ ರಾಮಯ್ಯ ಎಂದು ಜನ ಕರೆಯುತ್ತಾರೆ. ಸ್ಪರ್ಧಾರ್ಥಿಗಳ ನೋವಿಗೆ ಸ್ಪಂದಿಸಿ ಈ ಮಾತನ್ನು ಸಾಬೀತುಪಡಿಸಬೇಕಾಗಿದೆ.

ಸಂದರ್ಶನದ ಪೂರ್ಣಪಾಠ → 5

ಹಂಪಿ ಉತ್ಸವಕ್ಕೆ ಅದ್ದೂರಿ ತೆರೆ

ವಿಜಯನಗರ: ಗತವೈಭವ ಸಾರಿದ ಇಲ್ಲಿನ ಹಂಪಿಯ ನೆಲದಲ್ಲಿ ಹಮ್ಮಿಕೊಂಡಿದ್ದ ಮೂರು ದಿನಗಳ 'ಹಂಪಿ ಉತ್ಸವ-2025' ಭಾನುವಾರ ರಾತ್ರಿ ವರ್ಣರಂಜಿತವಾಗಿ ತೆರೆಕಂಡಿತು. ಮೂರು ದಿನಗಳ ಕಾಲ ನಡೆದ ಉತ್ಸವದಲ್ಲಿ ವಿಜಯನಗರ ಸಾಮ್ರಾಜ್ಯದ ಗತವೈಭವವನ್ನು ಕಲೆ, ಸಾಹಿತ್ಯ, ಸಂಗೀತ, ನೃತ್ಯದ ಮೂಲಕ ಮೆಲುಕು ಹಾಕಲಾಯಿತು.

ಉತ್ಸವದ ಕೊನೆಯ ದಿನವಾದ ಭಾನುವಾರ ರಾತ್ರಿ ನಡೆದ ಸಮಾರೋಪ ಸಮಾರಂಭದಲ್ಲಿ ಖ್ಯಾತ ಚಿತ್ರನಟಿ ರಮ್ಯಾ ಭಾಗವಹಿಸಿ ನೆರೆದಿದ್ದ ಪ್ರೇಕ್ಷಕರ ಮನರಂಜಿಸಿದರು.

ಸಮಾರೋಪ ಸಮಾರಂಭದ ವೇದಿಕೆ ಕಾರ್ಯಕ್ರಮದ ಆರಂಭಕ್ಕೂ ಮುನ್ನ ನಡೆದ ಸಾಂಸ್ಕೃತಿಕ ಕಾರ್ಯ ಕ್ರಮದಲ್ಲಿ ಬೆಂಗಳೂರಿನ ಅರ್ಥ್ ಚಾರಿಟೇಬಲ್ ಟ್ರಸ್ಟ್ ಪ್ರದರ್ಶಿಸಿದ ವಿಜಯನಗರ ಸಾಮ್ರಾಜ್ಯದ ಪ್ರಸಿದ್ಧ ದೊರೆ 'ಶ್ರೀಕೃಷ್ಣ ದೇವರಾಯ ವೈಭವ' ನೃತ್ಯರೂಪಕ ನೋಡುಗರನ್ನು ಮನರಂಜಿಸಿತು.

ಸಮಾಚಾರ ಸಣ್ಣದಲ್ಲ

ಮೂಗೂರು ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಆಯ್ಕೆ

ತಿ.ನರಸೀಪುರ: ತಾಲೂಕಿನ ಮೂಗೂರು ಗ್ರಾಮದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜಗದೀಶಮೂರ್ತಿ, ಉಪಾಧ್ಯಕ್ಷರಾಗಿ ಎಂ.ಬಿ.ಪರಶಿವಮೂರ್ತಿ ಅವಿರೋಧವಾಗಿ ಆಯ್ಕೆಗೊಂಡರು. ಚುನಾವಣಾ ಸಭೆಯಲ್ಲಿ ಸಂಘದ 12 ಮಂದಿ ನಿರ್ದೇಶಕರು ಭಾಗವಹಿಸಿದ್ದರು. ಚುನಾವಣಾಧಿಕಾರಿಯಾಗಿ ಎಚ್.ಎನ್.ಸುಮ ಕಾರ್ಯನಿರ್ವಹಿಸಿದರು. ಸಂಘದ ನಿರ್ದೇಶಕರುಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ಬಳಿಕ ಅಧ್ಯಕ್ಷ ಜಗದೀಶಮೂರ್ತಿ ಮಾತನಾಡಿ, ಅವಿರೋಧವಾಗಿ ಅಧ್ಯಕ್ಷರಾಗಲು ಸಹಕಾರ ನೀಡಿದ ನಿರ್ದೇಶಕರು ಹಾಗೂ ಸದಸ್ಯರೆಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘದ ಅಭಿವೃದ್ಧಿಗೆ ದುಡಿಯುತ್ತೇನೆ ಎಂದು ತಿಳಿಸಿದರು. ನಿರ್ದೇಶಕರಾದ ಎಂ.ಎನ್ .ನಿಜಗುಣ, ಎಂ.ಬಿ.ಮಹೇಂದ್ರ ಕುಮಾರ್, ರಮೇಶನಾಯಕ, ಎಂ.ಕೆ.ಶರತ್ ಕುಮಾರ, ಎಂ. ಶಿವಸ್ವಾಮಿ, ಕಮಲಮ್ಮ, ರಾಧ, ತವಸಾರಯ್ಯ, ಎಂ. ಶಿವಮೂರ್ತಿ, ಎಸ್.ಸತೀಶ್, ಗ್ರಾಪಂ ಅಧ್ಯಕ್ಷ ಎಂ.ಡಿ.ಲೋಕೇಶ್, ಸದಸ್ಯ ಪುಟ್ಟಮಾದಯ್ಯ, ಮುಖಂಡರಾದ ಚೇತನ್, ಗುರುಮಲ್ಲಯ್ಯ ಇದ್ದರು.

ಉಚಿತ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸಾ ಶಿಬಿರ

ಕೆ.ಆರ್.ಪೇಟೆ: ಕಣ್ಣು ಸೂಕ್ಷ್ಮ ಅಂಗ. ಕಣ್ಣಿನಲ್ಲಿ ಒಂದು ಸಣ್ಣ ದೋಷ ಕಂಡರೆ ದೇಹದಲ್ಲಿ ಅಲ್ಲೋಲ ಕಲ್ಲೋಲ ಉಂಟಾಗುತ್ತದೆ.ಆದ್ದರಿಂದ ಕಣ್ಣುಗಳ ದೃಷ್ಟಿಯು ಆರೋಗ್ಯವಾಗಿದ್ದರೆ ಜಗತ್ತನ್ನು ವೀಕ್ಷಿಸಬಹುದು ಎಂದು ಹೊಸಹೊಳಲು ಕೃಷಿ ಬತ್ತಿನ ಸಹಕಾರ ಸಂಘದ ನಿರ್ದೇಶಕ ಎಸ್.ಪ್ರಕಾಶ್ ಹೇಳಿದರು. ಹೊಸಹೊಳಲು ಗ್ರಾಮದಲ್ಲಿ ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಅಂದತ್ವ ಸಂಸ್ಥೆ ಮತ್ತು ಹೊಸಹೊಳಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಅಮ್ಮ ಕಣ್ಣಿನ ಆಸ್ಪತ್ರೆ ಮತ್ತು ರೇಬಿನಾಕೇರ್ ಸೆಂಟರ್ ಸಹಾಯದೊಂದಿಗೆ ಉಚಿತ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸಾ ಶಿಬಿರ ಉದ್ಘಾಟಿಸಿ ಮಾತನಾಡಿದವರು.

ಕಣ್ಣಿನ ದೃಷ್ಟಿ ಎಲ್ಲರಿಗೂ ಮಹತ್ವದ್ದು ವೃದ್ದರು ಕಣ್ಣಿನ ಪೊರೆಗೆ ತುತ್ತಾಗುತ್ತಿದ್ದಾರೆ. ಜನರಿಗೆ ಅನುಕೂಲ ಕಲ್ಪಿಸಲು ನಾವು ಈ ಶಿಬಿರವನ್ನು ಆಯೋಜಿಸಿದ್ದು ಪ್ರಯೋಜನ ಪಡೆದುಕೊಳ್ಳಿ ಎಂದರು. ಆಸ್ಪತ್ರೆಯ ಪರಿವೀಕ್ಷಕ ಮಹದೇವ್, ಸಂಘದ ಅಧ್ಯಕ್ಷ ಎಚ್. ಕೆ ಅಶೋಕ್, ಉಪಾಧ್ಯಕ್ಷ ಚಂದ್ರಶೇಖರ್, ನಿರ್ದೇಶಕರಾದ ಕೃಷ್ಣೆಗೌಡ, ಶ್ರೀಧರ್, ಶಶಿಧರ್, ಕೃಷ್ಣ, ಯೋಗೇಶ್ ಎನ್ ಗೌಡ, ಗೀತಾ, ಅಭಿಷೇಕ್, ತೇಜಾವತಿ, ಕಾರ್ಯದರ್ಶಿ ಜಿ.ಎನ್ ಪ್ರಮೋದ್ ಇದ್ದರು.

ಬಾಲ್ಯವಿವಾಹ ನಿರ್ಮೂಲನೆ ಆಗಲಿ

ಚಾಮರಾಜನಗರ: ಸುಶಿಕ್ಷಿತ ಸಮಾಜ ನಿರ್ಮಾಣದಿಂದ ಬಾಲ್ಯವಿವಾಹದ ಸಂಪೂರ್ಣ ನಿರ್ಮೂಲನೆ ಸಾಧ್ಯವಾಗಲಿದೆ ಎಂದು ಹೈಕೋರ್ಟ್ ನ್ಯಾಯಮೂರ್ತಿ ಕೆ. ಸೋಮಶೇಖರ್ ಅವರು ತಿಳಿಸಿದರು. ನಗರದ ಜಿಪಂ ಸಭಾಂಗಣದಲ್ಲಿ ನಡೆದ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಗಳಿಗೆ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬಾಲ್ಯವಿವಾಹ ಸಾಮಾಜಿಕ ಕಳಂಕ. ಸುಶಿಕ್ಷಿತ ಸಮಾಜದಿಂದ ಮಾತ್ರ ಬಾಲ್ಯವಿವಾಹ ಸಂಪೂರ್ಣ ನಿಯಂತ್ರಣಕ್ಕೆ ಬರಲಿದೆ ಎಂದರು. ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಈಶ್ವರ ಅವರು ಬಾಲ್ಯವಿವಾಹ ನಿಷೇಧದ ಪ್ರತಿಜ್ಞಾವಿಧಿ ಬೋಧಿಸಿದರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಮಾತನಾಡಿ, ಬಾಲ್ಯವಿವಾಹ ನಿರ್ಮೂಲನೆಗೆ ಹೆಚ್ಚಿನ ಅರಿವು ಮೂಡಿಸುವ ಚಟುವಟಿಕೆಗಳು ನಡೆಯುತ್ತಿದ್ದರೂ ಆಗಾಗ್ಗೆ ಜರುಗುತ್ತಿವೆ.ಈ ವ್ಯವಸ್ಥೆ ಬದಲಾಗಬೇಕು ಎಂದರು. ಜಿಲ್ಲೆಯ 130 ಗ್ರಾಮಪಂಚಾಯಿತಿಗಳಲ್ಲಿ ಸಾಕಷ್ಟು ಮಹಿಳಾ ಅಧ್ಯಕ್ಷರು, ಸದಸ್ಯರಿದ್ದಾರೆ. ಬಾಲ್ಯವಿವಾಹ ನಿರ್ಮೂಲನೆ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದರು. ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್, ಜಿಪಂ ಸಿಇಒ ಮೋನಾ ರೋತ್, ಎಡಿಸಿ ಗೀತಾ ಹುಡೇದ, ಶಿಕ್ಷಣ ತಜ್ಞ ಪ್ರೊ. ವಿ.ಪಿ. ನಿರಂಜನಾರಾಧ್ಯ, ಬಿನು ವರ್ಗಿಸ್, ಮೈಸೂರಿನ ಒಡನಾಡಿ ಸಂಸ್ಥೆಯ ಕೆ.ವಿ. ಸ್ಟ್ಯಾನ್ಲಿ ಇದ್ದರು.

ಏಕ ಬಳಕೆ ಪ್ಲಾಸ್ಟಿಕ್ ನಿಷೇಧಿಸಿ ಆದೇಶ

ಮೈಸೂರು: ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ''ಏಕ ಬಳಕೆ ಪ್ಲಾಸ್ಟಿಕ್'' ಅನ್ನು ನಿಷೇಧಿಸಿ ನಗರಪಾಲಿಕೆ ಆಯುಕ್ತರು ಆದೇಶಿಸಿದ್ದಾರೆ. ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚಗಳು, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತು ಥರ್ಮೋಕೋಲ್ ನಿಂದ ತಯಾರಾದ ವಸ್ತುಗಳ ವ್ಯಾಪಕ ಬಳಕೆಯಿಂದಾಗಿ ಪರಿಸರಕ್ಕೆ ಹಾನಿ ಹಾಗೂ ಮಾನವ ಮತ್ತಿತರ ಪ್ರಾಣಿಗಳ ಆರೋಗ್ಯಕ್ಕೆ ಅಪಾಯ ಉಂಟಾಗುತ್ತಿರುವುದರಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

{ಡಾ.ಎಚ್.ಸಿ.ಮಹದೇವಪ್ಪ } ಸಚಿವ

ಜಿಲ್ಲೆಯ ಸಮಸ್ಯೆಗಳನ್ನು ಬಗೆಹರಿಸಲು ಮಲೆ ಮಹದೇಶ್ವರ ಬೆಟ್ಟದಲ್ಲಿ ಕ್ಯಾಬಿನೆಟ್ ಸಭೆ ಆಯೋಜನೆ ಮಾಡಲಾಗಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ. ಶೀಘ್ರ ಕ್ಯಾಬಿನೆಟ್ ಸಭೆ ನಡೆಸಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಲಾಗುವುದು.

ಜಿಲ್ಲೆಯ 31 ಹಾಡಿಗಳಿಗೆ 42 ಕೋಟಿ ವೆಚ್ಚದಲ್ಲಿ ವಿದ್ಯುತ್ ಸಂಪರ್ಕ । ಸಚಿವ ಕೆ ವೆಂಕಟೇಶ್ ಚಾಲನೆ

ಹಾಡಿಗಳಿಗೆ ಬಂತು ವಿದ್ಯುತ್

ಚಾಮರಾಜನಗರ: ರಾಜ್ಯದಲ್ಲಿ 52 ಸಾವಿರ ಕೋಟಿಯ ಐದು ಗ್ಯಾರಂಟಿ ಯೋಜನೆಯ ಜೊತೆಗೆ ಚಾಮರಾಜನಗರ ಜಿಲ್ಲೆಯ 31 ಹಾಡಿಗಳಿಗೆ 42 ಕೋಟಿ ವೆಚ್ಚದಲ್ಲಿ ವಿದ್ಯುತ್ ಶಕ್ತಿ ಸಂಪರ್ಕ ನೀಡಲಾಗುತ್ತಿದೆ, ನಮ್ಮದು ನುಡಿದಂತೆ ನಡೆದ ಸರಕಾರ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಮೆಚ್ಚುಗೆ ವ್ಯಕ್ತಪಡಿಸಿದರು.

ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಾಲರ್ ಗ್ರಾಮದಲ್ಲಿ ಚಾಮರಾಜನಗರ ಹಾಗೂ ಕೊಳ್ಳೇಗಾಲ ಉಪ ವಿಭಾಗದದ ವತಿಯಿಂದ ನೂತನ ವಿದ್ಯುತ್ ಸಂಪರ್ಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ನಂತರ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಪ್ರಾಧಿಕಾರದ ಸಭೆಯಲ್ಲಿ ಹಾಡಿಗಳ ಸಮಸ್ಯೆಯ ಬಗ್ಗೆ ಚರ್ಚೆ ನಡೆಸಲಾಗಿತ್ತು.

ಸಮಾಜ ಕಲ್ಯಾಣ ಖಾತೆ ಸಚಿವ ಡಾ.ಎಚ್.ಸಿ. ಮಹದೇವಪ್ಪ ಮಾತನಾಡಿ, ರಾಜ್ಯದಲ್ಲಿ ನಮ್ಮ ಸರಕಾರ ಹಿಂದುಳಿದವರು, ಅಲ್ಪಸಂಖ್ಯಾತರು, ಪರಿಶಿಷ್ಟರು ಹಾಗೂ ಇತರ ಸಮಾಜಗಳ ಬೆಂಬಲಕ್ಕೆ ನಿಂತಿದೆ. ಪರಿಶಿಷ್ಟ ಫಲಾನುಭವಿಗಳಿಗೆ ವಸತಿ ಯೋಜನೆಗೆ ಈ ಹಿಂದೆ 2.35 ಲಕ್ಷ ಅನುದಾನ ನೀಡಲಾಗುತ್ತಿತ್ತು ಇದೀಗ 5 ಲಕ್ಷ ನೀಡಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಮೂರು ಅವಧಿಗೆ ಶಾಸಕರಾಗಿದ್ದ ಆರ್ ನರೇಂದ್ರ, ಹನೂರು ಕ್ಷೇತ್ರದಲ್ಲಿ ಹೆಚ್ಚಿನ ಅಭಿವೃದ್ಧಿ ಮಾಡಿದ್ದಾರೆ. ಈ ಹಿಂದೆ ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕೊಡಿಸಲು ಅವರು ಸಹ ಅವಿರತ ಪ್ರಯತ್ನ ಮಾಡಿದ್ದಾರೆ. ಸ್ವಾತಂತ್ರ್ಯ ನಂತರ ಮೊಟ್ಟಮೊದಲ ಬಾರಿಗೆ ವಿದ್ಯುತ್ ನೀಡಲಾಗಿದೆ ಎಂದರು.

ಪಾಲರ್ ಗ್ರಾಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ನೂತನ ವಿದ್ಯುತ್ ಸಂಪರ್ಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಂತ ಹಂತವಾಗಿ ಹಾಡಿಗಳ ಅಭಿವೃದ್ಧಿ

ಸ್ವಾತಂತ್ರ್ಯ ಬಂದು 78 ವರ್ಷಗಳಾದರೂ ಕಾಡಂಚಿನ ಗ್ರಾಮಗಳಿಗೆ ಮೂಲ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆ, ವಿದ್ಯುತ್ ಸೌಲಭ್ಯ ಕೊಡಲು ಸಾಧ್ಯವಾಗಿಲ್ಲ, ಹಾಡಿಗಳಲ್ಲಿನ ಜನ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಹಂತ ಹಂತವಾಗಿ ಹಾಡಿಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಹಾಡಿಗಳಲ್ಲಿನ 123 ಕಿಲೋಮೀಟರ್ ರಸ್ತೆ ಅಭಿವೃದ್ಧಿ ಪಡಿಸಲು ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಸಚಿವ ಕೆ.ವೆಂಕಟೇಶ್ ಹೇಳಿದರು.

ಶಾಸಕ ಎಂ.ಆರ್ ಮಂಜುನಾಥ್ ಮಾತನಾಡಿ, ಹನೂರು ತಾಲೂಕಿನ ರಸ್ತೆಗಳು ದುರಸ್ತಿಗೊಳ್ಳಬೇಕು. ಸರಕಾರ ಹೆಚ್ಚಿನ ಅನುದಾನ ನೀಡುವ ಮೂಲಕ ಅಭಿವೃದ್ಧಿಗೆ ಸಹಕಾರ ನೀಡಬೇಕಿದೆ. ಇದೀಗ ಪಾಲಾರ್ ಹಾಡಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ. ಉಳಿದ ಹಾಡಿಗಳಿಗೂ ವಿದ್ಯುತ್ ಸಂಪರ್ಕ ನೀಡಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಸೆಸ್ಕ್ ನಿಗಮದ ಅಧ್ಯಕ್ಷ ರಮೇಶ್ ಬಂಡಿ ಸಿದ್ದೇಗೌಡ, ಶಾಸಕರಾದ ಎ .ಆರ್ ಕೃಷ್ಣಮೂರ್ತಿ, ಮಾಜಿ ಶಾಸಕ ಆರ್ ನರೇಂದ್ರ, ಜಿಲ್ಲಾಧಿಕಾರಿ ಸಿ.ಟಿ ಶಿಲ್ಪನಾಗ್, ಜಿಪಂ ಸಿಇಒ ಮೋನೋರೋತ್, ಎಸ್ಪಿ ಡಾ. ಬಿ ಟಿ ಕವಿತಾ,ಡಿವೈಎಸ್ಪಿ ಧರ್ಮೇಂದ್ರ, ಚಾಮುಂಡೇಶ್ವರಿ ನಿಗಮದ ವ್ಯವಸ್ಥಾಪಕ ಮುನಿ ರಾಜಗೋಪಾಲ್, ಇಇ ತಬುಸಮಾ, ನಿರ್ಗಮಿತ ವ್ಯವಸ್ಥಾಪಕಿ ಶೀಲಾ, ಉಪವಿಭಾಗಾಧಿಕಾರಿ ಮಹೇಶ್, ತಹಸಿಲ್ದಾರ್ ವೈ ಕೆ ಗುರುಪ್ರಸಾದ್ ,ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಬಿಂದ್ಯಾ, ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ರಾಜೇಶ್ ಇದ್ದರು.

ಸರಕಾರಿ ಪದವಿ ಕಾಲೇಜಿನ ಹೆಣ್ಣು ಮಕ್ಕಳಿಗೆ 'ಅಕ್ಷಯ ದಾಸೋಹ'

ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 'ಪದವಿ ಅಕ್ಷಯ ದಾಸೋಹ' ಯೋಜನೆಗೆ ಶಾಸಕ ಟಿ.ಎಸ್. ಶ್ರೀವತ್ಸ ಚಾಲನೆ ನೀಡಿದರು.

ಮೈಸೂರು: ಕುವೆಂಪುನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 'ಪದವಿ ಅಕ್ಷಯ ದಾಸೋಹ' ಯೋಜನೆಗೆ ಕಾಲೇಜು ಅಭಿವೃದ್ಧಿ ಮಂಡಳಿಯ ಅಧ್ಯಕ್ಷರೂ ಆದ ಶಾಸಕ ಟಿ.ಎಸ್. ಶ್ರೀವತ್ಸ ಚಾಲನೆ ನೀಡಿದರು.

ಕಾಲೇಜು ಅಭಿವೃದ್ಧಿ ಮಂಡಳಿ, ಪ್ರಾಂಶುಪಾಲರು, ಪ್ರಾಧ್ಯಾಪಕರು, ಅಧ್ಯಾಪಕೇತರರೇ ಸೇರಿ ಈ ಯೋಜನೆಗೆ ವೈಯಕ್ತಿಕವಾಗಿ ದೇಣಿಗೆ ನೀಡಿರುವುದು ವಿಶೇಷ. ಇಸ್ಕಾನ್‌ನ ಅಕ್ಷಯ ಪಾತ್ರೆ ಯೋಜನೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿದ್ದು, ಅವರು ಮಧ್ಯಾಹ್ನದ ಊಟ ಪೂರೈಸುವರು. ನಗರ ಪ್ರದೇಶದವರಲ್ಲದ, ಹಾಸ್ಟೆಲ್‌ಗಳಲ್ಲಿ ವಾಸಿಸದ, ಗ್ರಾಮೀಣ ಪ್ರದೇಶದಿಂದ ಬರುವ 80 ಹೆಣ್ಣು ಮಕ್ಕಳನ್ನು ಮೊದಲ ಹಂತದಲ್ಲಿ ಯೋಜನೆಗೆ ಆಯ್ಕೆ ಮಾಡಲಾಗಿದೆ. ಈ ರೀತಿ ಇಸ್ಕಾನ್‌ಜೊತೆ ಒಪ್ಪಂದ ಮಾಡಿಕೊಂಡು ಮಧ್ಯಾಹ್ನದ ಊಟ ನೀಡುತ್ತಿರುವುದು ಇಡೀ ರಾಜ್ಯದಲ್ಲಿಯೇ ಇದೇ ಮೊದಲ ಪ್ರಕರಣ.

ಸಾಮಾನ್ಯವಾಗಿ ಎಲ್ಲಾ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರೇ ಸಂಖ್ಯೆ ಹೆಚ್ಚಿರುತ್ತದೆ. ಆದರೆ ಈ ಕಾಲೇಜಿನಲ್ಲಿ ವಿದ್ಯಾರ್ಥಿನಿಯರ ಸಂಖ್ಯೆ ಕಡಿಮೆ ಇದೆ. ಅಲ್ಲದೇ ಗ್ರಾಮೀಣ ಪ್ರದೇಶಗಳಿಂದ ಬರುವ ವಿದ್ಯಾರ್ಥಿಗಳೇ ಹೆಚ್ಚು. ಕೊಠಡಿಗಳ ಕೊರತೆ ಕಾರಣ ಪಾಳಿಯಲ್ಲಿ ತರಗತಿಗಳನ್ನು ನಡೆಸಲಾಗುತ್ತದೆ. ಹೀಗಾಗಿ ಬೆಳಗ್ಗೆ 8 ಗಂಟೆಗೆ ತರಗತಿ ಬರುವವರು ಬೆಳಗಿನ ಉಪಾಹಾರ ಮಾಡಿರುವುದಿಲ್ಲ, ಮಧ್ಯಾಹ್ನದ ಊಟ ಕೂಡ ಇರಲ್ಲ. ಇದನ್ನು ಅರಿತ ಪ್ರಾಂಶುಪಾಲ ಡಾ.ಪುಟ್ಟರಾಜ ಅವರು ತಮ್ಮ ಕಾಲೇಜಿನ ಸಿಬ್ಬಂದಿ ಬಳಿ ಸಮಾಲೋಚಿಸಿ, ದೇಣಿಗೆ ಮೂಲಕ ಮಧ್ಯಾಹ್ನದ ಊಟ ಯೋಜನೆ ಆರಂಭಿಸಬಹುದೇ ಎಂದು ಕೇಳಿದರು. ಇದಕ್ಕೆ ಎಲ್ಲರೂ ಸಮ್ಮತಿಸಿದರು. ನಂತರ ಶಾಸಕರ ಅಧ್ಯಕ್ಷತೆಯ ಸಿಡಿಸಿ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದರು. ಅಲ್ಲಿಯೂ ಒಪ್ಪಿಗೆ ಸಿಕ್ಕಿತು. ಹೀಗಾಗಿ ಮೊದಲ ಹಂತದಲ್ಲಿ ಗ್ರಾಮೀಣ ಭಾಗದ 80 ವಿದ್ಯಾರ್ಥಿನಿಯರಿಗೆ ಮಧಾಹ್ನದ ಊಟದ ಯೋಜನೆ ರೂಪಿಸಲಾಯಿತು. ಇಸ್ಕಾನ್ ಫೌಂಡೇಷನ್ ಈಗಾಗಲೇ ರಾಜ್ಯದ ವಿವಿಧೆಡೆ ಶಾಲೆಗಳಿಗೆ ಊಟದ ಒಡಂಬಡಿಕೆ ಮಾಡಿಕೊಂಡಿದೆ.

ಜಿಲ್ಲಾ ಉಪ್ಪಾರ ಸಂಘದಿಂದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಉಪ್ಪಾರ ಸಮುದಾಯಕ್ಕೆ ಶಿಕ್ಷಣವೇ ಆಸ್ತಿ

ಚಾಮರಾಜನಗರ: ಉಪ್ಪಾರ ಸಮುದಾಯಕ್ಕೆ ಶಿಕ್ಷಣವೇ ಆಸ್ತಿಯಾಗಿದ್ದು ಸಮುದಾಯ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಎಂಎಸ್ಐಎಲ್ ಅಧ್ಯಕ್ಷರು, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಸಲಹೆ ನೀಡಿದರು.

ನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಜಿಲ್ಲಾ ಉಪ್ಪಾರ ಸಂಘ, ಜಿಲ್ಲಾ ವ್ಯಾಪ್ತಿಯ ಎಲ್ಲಾ ಗಡಿಮನೆ,ಕಟ್ಟೆಮನೆ ಹಾಗೂ ಎಲ್ಲಾ ಗ್ರಾಮಗಳ ಯಜಮಾನರು, ಗ್ರಾಮಸ್ಥರು, ಜಿಲ್ಲೆಯ ತಾಲೂಕು ಉಪ್ಪಾರ ಸಂಘಗಳು,ಉಪ್ಪಾರ ನೌಕರರ ಸಂಘಗಳ ಸಂಯುಕ್ತಾಶ್ರಯದಲ್ಲಿ 2023-24ರ ಎಸ್ ಎಸ್ ಎಲ್ ಸಿ/ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಉದ್ಘಾಟಿಸಿ ಮಾತನಾಡಿದರು.

ಸಮುದಾಯದಲ್ಲಿ ಶೇ.80 ರಷ್ಟು ಕೂಲಿ ಮಾಡಿ ಜೀವನ ಸಾಗುತ್ತಿದ್ದಾರೆ. ಆಸ್ತಿವಂತರು ಕಡಿಮೆ ಇದ್ದಾರೆ. ಉಪ್ಪಾರ ಸಮುದಾಯಕ್ಕೆ ಶಿಕ್ಷಣವೇ ಆಸ್ತಿ. ನಾವು ಓದುವ ಸಂದರ್ಭದಲ್ಲಿ ಯಾವುದೇ ಸೌಲಭ್ಯ ಇರಲಿಲ್ಲ ತುಂಬಾ ಕಷ್ಟ ದಲ್ಲಿ ವಿದ್ಯಾಭ್ಯಾಸ ಮಾಡಿದ್ದೇವೆ ಎಂದರು.

ಹಬ್ಬಗಳ ಆಚರಣೆ ಕಡಿಮೆ ಮಾಡಬೇಕು. ಜಿಲ್ಲಾ ಕೇಂದ್ರದಲ್ಲಿ ಸುಸಜ್ಜಿತ ಉಪ್ಪಾರ ಭವನ ಆಗಲಿದ್ದು, ಮುಂದಿನ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಅಲ್ಲೇ ಮಾಡಲು ಚಿಂತಿಸಲಾಗಿದೆ ಎಂದರು.

ಜಿಪಂ ಮಾಜಿ ಉಪಾಧ್ಯಕ್ಷ ಯೋಗೀಶ್ ಮಾತನಾಡಿ, ಸ್ವಾತಂತ್ರ್ಯ ಬಂದ ಮೇಲೆ ಅಂಬೇಡ್ಕರ್ ಸಂವಿಧಾನ ಬರೆದುಕೊಟ್ಟ ಮೇಲೆ ನಮಗೆಲ್ಲ ಶಿಕ್ಷಣ ಕಲಿಯುವ ಅವಕಾಶ ದೊರೆತಿದೆ. ಮಹಿಳೆಯರಿಗೆ ಶೇ33 ಮೀಸಲಾತಿ ನೀಡಿದೆ. ಕೆಎಎಸ್, ಐಎಎಸ್, ಎಂಬಿಬಿಎಸ್ ಮಾಡುವವರೇ ವಿದ್ಯಾರ್ಥಿನಿಯರು ಹೆಚ್ಚು. ವಿದ್ಯಾರ್ಥಿ ಗಳು ಪೋಷಕರನ್ನು, ಗುರು- ಹಿರಿಯರನ್ನು ಮರೆಯಬಾರದು ಎಂದರು.

ಜಿ.ಪಂ.ಮಾಜಿ ಸದಸ್ಯ ಮಧುವಿನಹಳ್ಳಿ ಶಿವಕುಮಾರ್ ಮಾತನಾಡಿ, ನಮ್ಮ ಶ್ರಮದ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಬೇಕು. ರಾಜಕೀಯ ಕ್ಷೇತ್ರದಲ್ಲಿ ಉಪ್ಪಾರ ಸಮುದಾಯ ಹಿಂದುಳಿದಿದೆ. ಬಾಲ್ಯ ವಿವಾಹ ತ್ಯಜಿಸಿ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ನೀಡಿದರು.

ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ 250 ವಿದ್ಯಾರ್ಥಿಗಳಿಗೆ ನಗದು ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಜಿಲ್ಲಾ ಉಪ್ಪಾರ ಸಂಘದ ಅಧ್ಯಕ್ಷ ಯೋಗೇಶ್ ಉಪ್ಪಾರ್, ಬಿಇಒ ಹನುಮಶೆಟ್ಟಿ, ಇನ್ಸ್ಪೆಕ್ಟರ್ ಚಿಕ್ಕರಾಜಶೆಟ್ಟಿ, ಪ್ರಾಂಶುಪಾಲರಾದ ಸೋಮಣ್ಣ, ಪ್ರಿಯಶಂಕರ್, ಕೆಇಬಿ ಲೆಕ್ಕಾಧಿಕಾರಿ ಎಂ.ಮಹೇಶ್, ಜಿಲ್ಲಾ ಉಪ್ಪಾರ ಸಂಘದ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವು, ಗ್ರಾ.ಪಂ.ಅಧ್ಯಕ್ಷೆ ತೇಜಶ್ವಿನಿ, ಪಿಡಿಒ ಮಮತ, ನಗರಸಭಾ ಸದಸ್ಯರಾದ ಸಿ.ಎ.ಬಸವಣ್ಣ, ತಾಪಂ ಮಾಜಿ ಸದಸ್ಯರಾದ ಪುಟ್ಟಸ್ವಾಮಿ, ಮಹದೇವಶೆಟ್ಟಿ, ಗೋವಿಂದಶೆಟ್ಟಿ, ಪ್ರಕಾಶ್, ಗಡಿ ಯಜಮಾನರಾದ ಜಯಸ್ವಾಮಿ,ರುದ್ರಶೆಟ್ಟಿ, ನಾಗಶೆಟ್ಟಿ, ಚಿಕ್ಕತಾಂಡವಶೆಟ್ಟಿ, ಶಿಕ್ಷಕ ಗೋವಿಂದರಾಜು, ಕೃಷ್ಣಸ್ವಾಮಿ ಇದ್ದರು.

ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಎಂಇಎಸ್ ವಿರುದ್ಧ ಪ್ರತಿಭಟನೆ

ಎಂಇಎಸ್ ಪುಂಡಾಟ ಖಂಡಿಸಿ ಕರ್ನಾಟಕ ಸೇನಾ ಪಡೆ ಕಾರ್ಯಕರ್ತರು ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ಮಾಡಿದರು.

ಮೈಸೂರು: ಮೇಲಿಂದ ಮೇಲೆ ಕನ್ನಡಿಗರ ಮೇಲೆ ದೌರ್ಜನ್ಯ ಎಸಗುತ್ತಿರುವ ಎಂಇಎಸ್ ಪುಂಡಾಟ ಖಂಡಿಸಿ ಕರ್ನಾಟಕ ಸೇನಾ ಪಡೆ ಕಾರ್ಯಕರ್ತರು ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ಮಾಡಿದರು.

ಬೆಳಗಾವಿಯಲ್ಲಿ ಎಂಇಎಸ್ ಕಾರ್ಯಕರ್ತರು ಬಸ್ ಗಳಿಗೆ, ನಿರ್ವಾಹಕ ಹಾಗೂ ಚಾಲಕರಿಗೆ ಕಪ್ಪು ಮಸಿ ಬಳಿದು, ಅವರ ಮೇಲೆ ದೌರ್ಜನ್ಯವೆಸಗುತ್ತಿರುವುದು ಖಂಡನೀಯ ಎಂದರು.

ನಾವು ಕನ್ನಡಿಗರು ಶಾಂತಿ ಪ್ರಿಯರು, ಎಲ್ಲಾ ರಾಜ್ಯದ ಜನರನ್ನು ಗೌರವಿಸಿ, ಬೆಂಗಳೂರಿನಲ್ಲಿ ನಮ್ಮ ರಾಜ್ಯದಲ್ಲಿ ಜಾಗ ನೀಡಿದ್ದೇವೆ. ನಮ್ಮ ಸಹನೆ, ಶಾಂತಿಯನ್ನು ಕೆಣಕಬೇಡಿ ಎಂದು ಮರಾಠಿಗರಿಗೆ ಎಚ್ಚರಿಕೆಯನ್ನು ನೀಡುತ್ತಿದ್ದೇವೆ ಎಂದು ಹೇಳಿದರು.

ರಾಜ್ಯದ ಗಡಿಯಲ್ಲಿ ಸೌಹಾರ್ದತೆ ಹಾಳು ಮಾಡಿ, ಎರಡು ರಾಜ್ಯಗಳ ನಡುವೆ ಅಶಾಂತಿ ಉಂಟು ಮಾಡುತ್ತಿರುವ ಈ ಎಂಇಎಸ್ ಸಂಘಟನೆಯನ್ನು ಸರಕಾರ ಬ್ಯಾನ್ ಮಾಡಬೇಕು. ಇವರ ವಿರುದ್ಧ ಗೃಹ ಸಚಿವರು ಸೂಕ್ತ ಕ್ರಮ ಕೈಗೊಂಡು ಇದಕ್ಕೆ ಶಾಶ್ವತವಾಗಿ ಅಂತ್ಯ ಹಾಡಬೇಕು. ಕನ್ನಡ ನಾಡು, ನುಡಿ ಬಗ್ಗೆ ಅಭಿಮಾನವಿಲ್ಲದ ಹೊರ ರಾಜ್ಯಗಳ ಐಎಎಸ್, ಐಪಿಎಸ್ ಅಧಿಕಾರಿಗಳ ಬದಲು ನಮ್ಮ ಕನ್ನಡ ನಾಡಿನ ಅಧಿಕಾರಿಗಳನ್ನು ಗಡಿ ಜಿಲ್ಲೆಗಳಿಗೆ ನೇಮಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಕಾಂಗ್ರೆಸ್ ಸರಕಾರದ ಯಾವೊಬ್ಬ ಚುನಾಯಿತ ಪ್ರತಿನಿಧಿಗಳು, ಬೆಳಗಾವಿ ಸಚಿವರು ಕಂಡಕ್ಟರ್ ಹಾಗೂ ಕನ್ನಡಿಗರ ಪರವಾಗಿ ಮಾತನಾಡದಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಕನ್ನಡಿಗರನ್ನು ನಿರ್ಲಕ್ಷಿಸುವ ರಾಜಕಾರಣಿಗಳು ಮುಂಬರುವ ಚುನಾವಣೆಗಳಲ್ಲಿ ಪರಿಣಾಮವನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಪಡೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಪ್ರಭು ಶಂಕರ್, ಕೃಷ್ಣಪ್ಪ, ಪ್ರಜೀಶ್, ಕುಮಾರ್ ಗೌಡ, ಬೋಗಾದಿ ಸಿದ್ದೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಸೆಸ್ಕ್ ಎಂಡಿ ಅಧಿಕಾರ ಸ್ವೀಕಾರ

ಸೆಸ್ಕ್‌ನ ಪ್ರಭಾರ ವ್ಯವಸ್ಥಾಪಕ ನಿರ್ದೇಶಕರಾಗಿ ಕೆ.ಎಂ. ಮುನಿಗೋಪಾಲ್ ರಾಜು ಅಧಿಕಾರ ಸ್ವೀಕರಿಸಿದರು.

ಮೈಸೂರು: ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಸಮರ್ಪಕವಾಗಿ ಕೆಲಸ ಮಾಡುವ ಮೂಲಕ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್)ವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಶ್ರಮಿಸೋಣ ಎಂದು ಸೆಸ್ಕ್‌ನ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ. ಮುನಿಗೋಪಾಲ್ ರಾಜು ತಿಳಿಸಿದರು.

ವಿಜಯನಗರ 2ನೇ ಹಂತದಲ್ಲಿರುವ ನಿಗಮದ ಪ್ರಧಾನ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪ್ರಭಾರ ವ್ಯವಸ್ಥಾಪಕರಾಗಿ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು, ನಿಗಮದಲ್ಲಿ ಕೆಲಸ ಮಾಡುತ್ತಿರುವ ಎಲ್ಲರೂ ತಂಡವಾಗಿ ಕೆಲಸ ಮಾಡಬೇಕಿದೆ. ಆದ್ಯತೆ ಮೇರೆಗೆ ಕೆಲಸ ಮಾಡಬೇಕಿದೆ. ನಿಗಮವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಎಲ್ಲರ ಸಹಕಾರ ಅಗತ್ಯ. ಎಲ್ಲರೂ ತಮ್ಮ ಜವಾಬ್ದಾರಿ ಅರಿತು ಸಮರ್ಪಕವಾಗಿ ನಿರ್ವಹಿಸಬೇಕಿದೆ ಎಂದು ಸೂಚನೆ ನೀಡಿದರು.

ನಿಗಮವೂ ಈಗಾಗಲೇ ತಾಂತ್ರಿಕ ನಿರ್ವಹಣೆಯಲ್ಲಿ ಸುಧಾರಣೆಯನ್ನು ಕಂಡಿದ್ದು, ಆರ್ಥಿಕ ಮತ್ತು ಆಡಳಿತ ವಿಭಾಗದಲ್ಲಿ ಮತ್ತಷ್ಟು ಸುಧಾರಣೆ ಆಗಬೇಕಿದೆ. ಕೆಲಸಗಳನ್ನು ನಿಗದಿತ ಸಮಯದಲ್ಲಿ ಪೂರ್ಣವಾಗುವಂತೆ ಗಮನವಹಿಸಿ ಎಂದು ಹೇಳಿದರು.

ಯೋಗಾಚಾರ್ಯ ಪ್ರಶಸ್ತಿ ಪ್ರದಾನ

ನಗರದ ಪರಮಹಂಸ ಯೋಗ ಕೇಂದ್ರದಲ್ಲಿ ಯೋಗಾಚಾರ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು: ನಗರದ ಪರಮಹಂಸ ಯೋಗ ಮಹಾವಿದ್ಯಾಲಯದಲ್ಲಿ ಶ್ರೀರಾಮಕೃಷ್ಣ ಪರಮಹಂಸರ 190ನೇ ಜಯಂತಿ ಆಚರಿಸಲಾಯಿತು. ಇದೇ ವೇಳೆ ಇಬ್ಬರಿಗೆ ಯೋಗ ರತ್ನ ಹಾಗೂ ಆರು ಮಂದಿಗೆ ಯೋಗಾಚಾರ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

ರಾಣಿ ಸ್ವಾಮಿಗೌಡ ಹಾಗೂ ಎಸ್. ಕಾವ್ಯಾ ಅವರಿಗೆ ಯೋಗ ರತ್ನ, ಬಿ.ಜಿ. ವಿಜಯಕುಮಾರ್, ಎಸ್. ಕಾವ್ಯಾ, ಆನಂದ್ ಬಾಳು ಶಿರೋಳ್, ಎನ್.ಆರ್. ರೂಪಶ್ರೀ, ಎಂ.ಡಿ. ಸ್ವಪ್ನಾ, ವಿ. ಹರಿಪ್ರಸಾದ್ ಅವರಿಗೆ ಯೋಗಾಚಾರ್ಯ ಪ್ರಶಸ್ತಿಯನ್ನು ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಪ್ರದಾನ ಮಾಡಿದರು. ಪ್ರಶಸ್ತಿ ಪುರಸ್ಕೃತರ ಪರವಾಗಿ ರಾಣಿ ಸ್ವಾಮಿಗೌಡ ಮಾತನಾಡಿ, ಯೋಗದಿಂದ ಪಾರ್ಶವಾಯು ಪೀಡಿತವನ್ನು ಗುಣಪಡಿಸಬಹುದು ಎಂದು ಹಲವಾರು ನಿದರ್ಶನಗಳ ಸಹಿತ ವಿವರಿಸಿದರು. ಪರಮಹಂಸ ಯೋಗ ಕೇಂದ್ರದ ಸಂಸ್ಥಾಪಕ ಶಿವಪ್ರಕಾಶ್ ಮಾತನಾಡಿ, ಇದುವರೆಗೆ 13 ತಂಡಗಳಿಗೆ ಯೋಗ ಶಿಕ್ಷಕ ತರಬೇತಿ ನೀಡಲಾಗಿದೆ. ಇಲ್ಲಿ ತರಬೇತಿ ಪಡೆದವರು ದೇಶ-ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು. ಪರಮಹಂಸ ಯೋಗ ವಿದ್ಯಾಲಯದ ಸಂಯೋಜಕಿ ಆರ್. ಭಾವನಾ, ಪ್ರಾಂಶುಪಾಲ ಬಿ.ಜಿ. ವಿಜಯಕುಮಾರ್, ಥೆರಪಿ ಚಿಕಿತ್ಸಕಿ ಗಾಯಿತ್ರಿ ಅರುಣ್, ಯೋಗ ಒಕ್ಕೂಟದ ಉಪಾಧ್ಯಕ್ಷ ಎನ್. ಪಶುಪತಿ, ರಾಮಚಂದ್ರನಾಯಕ್ ಇದ್ದರು.

ಜಿಲ್ಲೆಯ ಋಣ ತೀರಿಸಲು ಪ್ರಯತ್ನ

ಮಂಡ್ಯ: ಹುಟ್ಟಿದ್ದು ಕರಾವಳಿ ಭಾಗದಲ್ಲಾದರೂ ಭಾವನಾತ್ಮಕವಾಗಿ ನನ್ನ ತವರು ಮನೆ ಮಂಡ್ಯ ಜಿಲ್ಲೆ. ಜಿಲ್ಲೆಯ ಋಣ ತೀರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಮಾಹಿತಿ ಆಯೋಗದ ಆಯುಕ್ತ ಬದ್ರುದ್ದೀನ್ ಕೆ.ಮಾಣಿ ಹೇಳಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಅಧ್ಯಾಪನ ಟ್ರಸ್ಟ್ ಸಹಯೋಗದಲ್ಲಿ ನಡೆದ ಅಭಿನಂದನೆ ಮತ್ತು ಡೈರಿ ಬಿಡುಗಡೆ ಸಮಾರಂಭದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದರು. ನಾನು ಮಂಡ್ಯದಲ್ಲಿ ಪತ್ರಕರ್ತನಾಗಿ ಕೆಲಸ ಮಾಡುತ್ತಿದ್ದಾಗ ನನಗೆ ನೀವು ಕೊಟ್ಟ ಪ್ರೋತ್ಸಾಹ ದೊಡ್ಡದು ಎಂದರು. ಶಾಸಕ ಪಿ. ರವಿಕುಮಾರ್‌ಗೌಡ ಗಣಿಗ ಮಾತನಾಡಿ, ಪ್ರಸ್ತುತ ಪತ್ರಕರ್ತರಿಗೆ ಸರಕಾರದ ಮಟ್ಟದಲ್ಲಿ ಉನ್ನತ ಹುದ್ದೆಗಳು ಸಿಗುತ್ತಿವೆ. ನೂರಾರು ಜನರ ಸಮಸ್ಯೆಗಳ ನಿವಾರಿಸಲು ಪತ್ರಕರ್ತರ ಹುದ್ದೆ ಉನ್ನತವಾಗಿದೆ ಎಂದು ಹೇಳಿದರು.ಜಿಲ್ಲಾಧಿಕಾರಿ ಡಾ.ಕುಮಾರ , ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಎನ್.ನವೀನ್‌ಕುಮಾರ್, ರಾಜ್ಯ ಕಾರ್ಯದರ್ಶಿ ಸೋಮಶೇಖರ್ ಕೆ.ಸಿ.ಮಂಜುನಾಥ್, ಬಿ.ಪಿ.ಪ್ರಕಾಶ್ ಇದ್ದರು.

ಬಲ್ಲೇನಹಳ್ಳಿ ಸರಕಾರಿ ಶಾಲೆಗೆ ಬ್ಯಾಂಡ್ ಸೆಟ್

ಕೆ.ಆರ್.ಪೇಟೆ: ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳಷ್ಟೆ ಪಠ್ಯೇತರ ಚಟುವಟಿಕೆಗಳು ಸಹ ವಿದ್ಯಾರ್ಥಿಗಳ ವ್ಯಕ್ತಿತ್ವ ಬೆಳವಣಿಗೆಗೆ ಕಾರಣವಾಗುತ್ತವೆ ಎಂದು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ರಮೇಶ್ ಅಭಿಪ್ರಾಯಪಟ್ಟರು. ಬೂಕನಕೆರೆ ಹೋಬಳಿ ಬಲ್ಲೇನಹಳ್ಳಿ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ಗಾದೆಯಂತೆ ವಿದ್ಯಾರ್ಥಿಗಳು ಬಾಲ್ಯದಲ್ಲಿಯೇ ಸಂಸ್ಕಾರ ಗುಣಗಳನ್ನು ಮೈಗೂಡಿಸಿಕೊಂಡರೆ ದೊಡ್ಡವರಾದ ಮೇಲೆ ಗುಣವಂತನಾಗಲು ಸಾಧ್ಯ. ಎಲ್ಲರಿಗೂ ನಮ್ಮೂರ ಶಾಲೆ ಎಂಬ ಭಾವನೆ ಬರಬೇಕು. ಸರಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಕಮ್ಮಿ ಇಲ್ಲ. ಅಲ್ಲದೆ ನಮ್ಮೂರ ಹೆಮ್ಮೆಯ ಸುಪುತ್ರ ಶಾಲೆ ಮಕ್ಕಳಿಗೋಸ್ಕರ ಕೆ ಇ ಬಿ ಕಂಟ್ರಾಕ್ಟರ್ ಬಲ್ಲೇನಹಳ್ಳಿ ರಾಮು ಬ್ಯಾಂಡ್ ಸೆಟ್ ಅನ್ನು ಉಚಿತವಾಗಿ ಕೊಡುಗೆಯಾಗಿ ನೀಡಿರುವುದು ಹೆಮ್ಮೆಯ ವಿಷಯ ಎಂದರು. ಕೆ ಇ ಬಿ ಕಂಟ್ರಾಕ್ಟರ್ ಬಲ್ಲೇನಹಳ್ಳಿ ರಾಮು ಮಾತನಾಡಿ, ನಾವು ಓದಿದ ಶಾಲೆ, ಹುಟ್ಟೂರಿಗೆ ಏನಾದರೂ ನಮ್ಮ ಸೇವೆ ನಿರಂತರವಾಗಿ ಇರಬೇಕು. ಸರಕಾರಿ ಶಾಲೆಯಲ್ಲಿ ಬಡವರ ಮಕ್ಕಳು, ರೈತರ ಮಕ್ಕಳು ಓದುತ್ತಿರುತ್ತಾರೆ.ಅಂತಹ ಮಕ್ಕಳಿಗೆ ನಮ್ಮ ಕೈಲಾದ ಸಹಾಯವನ್ನು ಮಾಡುವುದು ನಮ್ಮ ಧರ್ಮ. ನನ್ನ ಸಹಕಾರ ನಿರಂತರವಾಗಿ ಇರುತ್ತದೆ ಎಂದು ಹೇಳಿದರು. ಪಿ ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಕಬ್ಬಲಗೆರೆಪುರ ಪುಟ್ಟಸ್ವಾಮಿಗೌಡ, ಗ್ರಾಪಂ ಮಾಜಿ ಅಧ್ಯಕ್ಷ ಕುಮಾರ್, ನಂದೀಶ್, ಮುಖ್ಯ ಶಿಕ್ಷಕಿ ಮೀನಾಕ್ಷಿ,ಲಲಿತಾ,ರಾಮು ಇದ್ದರು.

ಕೊಡಗಿನಲ್ಲಿ ಸುಸಜ್ಜಿತ ಬಾಸ್ಕೆಟ್ ಬಾಲ್ ಕೋರ್ಟ್ ಉದ್ಘಾಟನೆ

ಕ್ರೀಡಾ ತಾರೆಗಳಿಗೆ ಪ್ರೋತ್ಸಾಹ ಸ್ವಾಗತಾರ್ಹ

ಮಡಿಕೇರಿ: ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಿದ್ದರೂ ಕುಟುಂಬ ಸದಸ್ಯರೊಂದಿಗೆ ಇತರರ ಪ್ರೋತ್ಸಾಹ ಕೂಡ ಅತ್ಯಗತ್ಯ. ಕ್ರೀಡಾಕ್ಷೇತ್ರದಲ್ಲಿಯೂ ಇಂಥ ಸಹಕಾರವಿದ್ದರೆ ಕ್ರೀಡಾಪಟುಗಳು ಬೆಳಕಿಗೆ ಬರಲು ಸಾಧ್ಯ ಎಂದು ಕೊಡಗಿನ ಹೆಸರಾಂತ ಬಾಸ್ಕೆಟ್ ಬಾಲ್ ಆಟಗಾರ್ತಿ ಮಂಡೆಪಂಡ ಡಾ. ಪುಪ್ಪಾ ಕುಟ್ಟಣ್ಣ ಹೇಳಿದ್ದಾರೆ.

ನಗರದ ಕೊಡಗು ವಿದ್ಯಾಲಯದಲ್ಲಿ 55 ಲಕ್ಷ ರು. ವೆಚ್ಚದಲ್ಲಿ ಸ್ಥಾಪನೆಯಾದ ತನ್ನದೇ ಹೆಸರಿನ ಡಾ. ಪುಪ್ಪಾ ಕುಟ್ಟಣ್ಣ ಬಾಸ್ಕೆಟ್ ಬಾಲ್ ಕೋರ್ಟ್ ಉದ್ಘಾಟಿಸಿ ಮಾತನಾಡಿದರು.

ಅನೇಕ ಸ್ಥಳಗಳಲ್ಲಿ ನಿರ್ಮಾಣವಾಗಿರುವ ಬಾಸ್ಕೆಟ್ ಬಾಲ್ ಕೋರ್ಟ್‌ಗಿಂತ ಕೊಡಗು ವಿದ್ಯಾಲಯದ ಕ್ರೀಡಾಂಗಣ ವಿನೂತನವಾಗಿದೆ. ಕೊಡಗಿನಲ್ಲಿ ಇಂಥ ಹೊಸತನದ ಪ್ರಯತ್ನ ಶ್ಲಾಘನೀಯ. ತನ್ನ ಹೆಸರಿನಲ್ಲಿಯೇ ಬಾಸ್ಕೆಟ್ ಬಾಲ್ ಅಂಕಣ ಆಗಿರುವುದು ತನ್ನ ಕ್ರೀಡಾಜೀವನದಲ್ಲಿಯೇ ಸ್ಮರಣೀಯವಾಗಿದೆ ಎಂದೂ ಅವರು ಧನ್ಯತಾ ಭಾವದಿಂದ ಹೇಳಿದರು. ಪ್ರತೀ ಕ್ರೀಡಾಸಾಧಕರಿಗೆ ಮುಖ್ಯವಾಗಿ ಛಲ, ಗುರಿ ಬೇಕು. ಕ್ರೀಡಾಕ್ಷೇತ್ರದಲ್ಲಿಯೂ ಸಾಕಷ್ಟು ವಿಚಾರಗಳನ್ನು ಹೊಸದ್ದಾಗಿ ಕಲಿಯುವ ಅವಕಾಶಗಳಿರುತ್ತವೆ. ಕ್ರೀಡಾಕ್ಷೇತ್ರದ ಮೂಲಕ ಸಮಾಜದಲ್ಲಿ ಗುರುತಿಸಿಕೊಳ್ಳುವುದರೊಂದಿಗೆ, ತಮ್ಮ ಪ್ರತಿಭೆಯನ್ನೂ ಬೆಳಕಿಗೆ ತರಲು ಸಾಧ್ಯ ಎಂದೂ ಪುಪ್ಪಾ ಕುಟ್ಟಣ್ಣ ಹೇಳಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಬಾಸ್ಕೆಟ್ ಬಾಲ್ ಆಟಗಾರ, ಕೊಡಗು ವಿದ್ಯಾಲಯದ ಸಲಹೆಗಾರ ಪ್ರೊ. ಜುಗನ್ ಸುಖಿನ್ವೇಷರ್ ದ್ಯಾನೇಶ್ವರನ್ ಮಾತನಾಡಿ, ಮಕ್ಕಳಿಗೆ ತರಬೇತಿ ನೀಡುವಲ್ಲಿ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಕೊಡಗು ವಿದ್ಯಾಲಯ ಆಡಳಿತ ಮಂಡಳಿ ನಿರ್ದೇಶಕ ಸಿ.ಎಸ್. ಗುರುದತ್ , ಸಾಕಮೂರಿ ಕುಟುಂಬದ ಎಸ್. ವಿ. ನರಸಯ್ಯ ಸ್ಮರಣೆಯಲ್ಲಿ ಅವರ ಮಕ್ಕಳಾದ ನಾಗಾರ್ಜುನ್ ಮತ್ತು ಪ್ರಶಾಂತ್ ಸಾಕಮೂರಿ ಸಹಕಾರದಲ್ಲಿ 55 ಲಕ್ಷ ರು. ವೆಚ್ಚದಲ್ಲಿ ಸುಸಜ್ಜಿತವಾಗಿ ನಿರ್ಮಾಣವಾಗಲು ಸಾಧ್ಯವಾಯಿತು ಎಂದು ಸ್ಮರಿಸಿಕೊಂಡರು. ನಿವೃತ್ತ ಏರ್ ಮಾರ್ಷಲ್ ಕೆ.ಸಿ.ಕಾರ್ಯಪ್ಪ, ಕೊಡಗು ವಿದ್ಯಾಲಯದ ಉಪಾಧ್ಯಕ್ಷೆ ಊರ್ವಶಿ ಮುದ್ದಯ್ಯ, ಕ್ರೀಡಾಸಮಿತಿ ಅಧ್ಯಕ್ಷ ರಘುಮಾದಪ್ಪ, ಸಲಹೆಗಾರರಾದ ಪಿ.ಇ. ಕಾಳಯ್ಯ, ಕೆ.ಯು. ಸುಬ್ಬಯ್ಯ, ಪ್ರಾಂಶುಪಾಲರಾದ ಕೆ.ಎಸ್. ಸುಮಿತ್ರಾ, ಆಡಳಿತಾಧಿಕಾರಿ ಪಿ. ರವಿ ಇದ್ದರು.

ಜನತಾ ಬಜೆಟ್ ಶಾಸಕರಿಗೆ ಸಲ್ಲಿಕೆ

ಮಡಿಕೇರಿ: ರಾಜ್ಯ ಸರಕಾರದ ಬಜೆಟ್ ನಲ್ಲಿ ಕೊಡಗು ಜಿಲ್ಲೆಯ ಅಭಿವೃದ್ಧಿಗೆ ಪೂರಕವಾದ ಮತ್ತು ಜನಪರ ಅಂಶಗಳನ್ನು ಅಳವಡಿಸುವಂತೆ ಒತ್ತಾಯಿಸಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಪಕ್ಷ ರಚಿಸಿರುವ 'ಜನತಾ ಬಜೆಟ್' ಪ್ರತಿಯನ್ನು ಪಕ್ಷದ ಪ್ರಮುಖರು ಶಾಸಕದ್ವಯರಿಗೆ ಸಲ್ಲಿಸಿದರು. ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಅಮೀನ್ ಮೊಹಸಿನ್ ಅವರ ನೇತೃತ್ವದ ನಿಯೋಗ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಹಾಗೂ ಮಡಿಕೇರಿ ಶಾಸಕ ಡಾ.ಮಂತರ್ ಗೌಡ ಅವರನ್ನು ನಗರದಲ್ಲಿ ಭೇಟಿಯಾಗಿ ಮನವಿ ಮಾಡಿದರು. ರಾಜ್ಯ ಬಜೆಟ್ ಮಂಡನೆ ಮಾಡುವ ಸಂದರ್ಭ ವನ್ಯಜೀವಿಗಳ ಸಮಸ್ಯೆ, ರೈತರ ಹಾಗೂ ಕಾರ್ಮಿಕ ಸಂಕಷ್ಟಗಳಿಗೆ ಪರಿಹಾರ, ಶಿಕ್ಷಣಕ್ಕೆ ಒತ್ತು ನೀಡಿ ಕಾನೂನು ಕಾಲೇಜು ಸ್ಥಾಪನೆ, ಉನ್ನತ ಶಿಕ್ಷಣದ ತರಬೇತಿ ಕೇಂದ್ರಗಳ ಆರಂಭ, ಕೊಡಗು ವಿವಿ ಉಳಿಸುವುದು, ಜನರ ಆರೋಗ್ಯದ ಹಿತದೃಷ್ಟಿಯಿಂದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಆರಂಭ ಸೇರಿದಂತೆ ಸುಮಾರು 12 ಬೇಡಿಕೆಗಳ ಮನವಿಯನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಎಸ್‌ಡಿಪಿಐ ಪಕ್ಷದ ನಗರಸಭಾ ಸದಸ್ಯರುಗಳಾದ ಎಂ.ಕೆ.ಮನ್ಸೂರ್ ಆಲಿ, ಬಶೀರ್ ಅಹ್ಮದ್ ಹಾಗೂ ಮೇರಿ ವೇಗಸ್ ನಿಯೋಗದಲ್ಲಿದ್ದರು.

ಸಮಾಚಾರ ಸಣ್ಣದಲ್ಲ

ವಾಹನ ಡಿಕ್ಕಿ: ಚಿರತೆ ಸಾವು



ಚನ್ನಪಟ್ಟಣ: ಪ್ರಾದೇಶಿಕ ಅರಣ್ಯ ವಲಯದ ಕದರಮಂಗಲ ಬಳಿ ರಸ್ತೆ ದಾಟುವಾಗ ವಾಹನ ಡಿಕ್ಕಿಯಾಗಿ ಚಿರತೆ ಸಾವನ್ನಪ್ಪಿದೆ. ಕದರಮಂಗಲ ಬೀಟ್ ವ್ಯಾಪ್ತಿಯ ತುರೆಕೆರೆ ಬೈಲು ಗುಡ್ಡೆ ಬಳಿ ಎರಡು ವರ್ಷ ಪ್ರಾಯದ ಗಂಡು ಚಿರತೆ ರಾತ್ರಿ ಸಮಯದಲ್ಲಿ ತಿಮ್ಮಸಂದ್ರ, ಅವೇರಹಳ್ಳಿ ರಸ್ತೆಯನ್ನು ದಾಟುವಾಗ ಅಪಘಾತವಾಗಿ ಚಿರತೆ ಸಾವಿಗೀಡಾಗಿದೆ ಎಂದು ವಲಯ ಅರಣ್ಯಾಧಿಕಾರಿ ಮಲ್ಲೇಶ್ ಮಾಹಿತಿ ನೀಡಿದ್ದಾರೆ. ಎಂ ಬಿ ಹಳ್ಳಿ ಗ್ರಾಮದ ಪಶು ಆಸ್ಪತ್ರೆಯ ವೈದ್ಯಾಧಿಕಾರಿಗಳು ಮರಣೋತ್ತರ ಪರೀಕ್ಷೆ ನಡೆಸಿದರು. ಈ ಸಂಬಂಧ ಅರಣ್ಯ ಅಪರಾಧ ಪ್ರಕರಣ ದಾಖಲು ಮಾಡಿಕೊಂಡು ತನಿಖೆ ನಡೆಸಲಾಗುತ್ತಿದೆ.

ಚಿರತೆ ಬೋನಿಗೆ: ಸಾರ್ವಜನಿಕರಿಗೆ ಉಪಟಳ ನೀಡುತ್ತಿದ್ದ ಚಿರತೆ ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ. ಇಗ್ಗಲೂರು ಬಳಿ ಪಾಳು ಬಿದ್ದಿರುವ ಪಿಡಬ್ಲೂಡಿ ವಸತಿ ಪ್ರದೇಶದಲ್ಲಿ ಇಟ್ಟಿದ್ದ ಬೋನಿಗೆ ಸೆರೆಸಿಕ್ಕಿದೆ. ಕಳೆದ ಹಲವು ದಿನಗಳಿಂದ ರೈತರಿಗೆ ತೊಂದರೆ ಕೊಡುತ್ತಿದ್ದ ಕಾರಣ ಬೋನು ಇರಿಸಲಾಗಿತ್ತು.

ವಾಸನ್ ಆಸ್ಪತ್ರೆಯಲ್ಲಿ ನೇತ್ರ ತಪಾಸಣಾ ಶಿಬಿರ

ಕೋಲಾರ: ಜನತೆ ಕಣ್ಣಿನ ಸಮಸ್ಯೆ ಬಂದ ತಕ್ಷಣ ತಜ್ಞ ವೈದ್ಯರನ್ನು ಭೇಟಿ ಆಗಿ ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ಆರೋಗ್ಯ ಭಾಗ್ಯ ಹೊಂದಬೇಕೆಂದು ವಾಸನ್ ಕಣ್ಣಿನ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಕಾವ್ಯ ಹೇಳಿದರು. ನಗರದ ವಾಸನ್ ಕಣ್ಣಿನ ಆಸ್ಪತ್ರೆಯಲ್ಲಿ ನಡೆದ ಉಚಿತ ಕಣ್ಣಿನ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿ, ಪಂಚೇಂದ್ರಿಯಗಳಲ್ಲಿ ಕಣ್ಣು ಅತಿ ಮುಖ್ಯ. ಕಣ್ಣಿನ ಬಗ್ಗೆ ನಿಗಾ ವಹಿಸಬೇಕು. ಕಣ್ಣಿಗೆ ಸ್ವಯಂ ಚಿಕಿತ್ಸೆ ಸರಿಯಲ್ಲ, ವೈದ್ಯರ ಸಲಹೆ ಇಲ್ಲದೆ ಯಾವುದೇ ಔಷಧವನ್ನು ಕಣ್ಣಿಗೆ ಹಾಕಬಾರದು ಎಂದರು. ಯಶಸ್ವಿನಿ ಸದಸ್ಯರಿಗೆ ನಗದು ರಹಿತ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಸೌಲಭ್ಯವಿದ್ದು ಅಗತ್ಯವುಳ್ಳವರು ಇದರ ಸದುಪಯೋಗಕ್ಕೆ ಮುಂದಾಗಬೇಕು ಎಂದರು. ಮಾರ್ಕೆಟಿಂಗ್ ಮುಖ್ಯಸ್ಥ ಶಶಿಧರ್, ರೆಸಿಪ್ಷನ್ ಭಾನುಪ್ರಿಯ, ಸಿಬ್ಬಂದಿ ಉದಯ್,ಶರತ್, ಶೃತಿ, ಸುನಿಲ್, ಸುರೇಖ, ಪ್ರೇಮ, ನಂದಿನಿ ಇದ್ದರು.

ಸರಕಾರಿ ಶಾಲೆಗಳ ಬೆಳೆಸಿ: ಬಿಇಓ

ಗುಬ್ಬಿ: ಕನ್ನಡ ಮಾಧ್ಯಮ ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸುವ ಕಾರ್ಯ ಗ್ರಾಮೀಣ ಭಾಗದಲ್ಲಿ ಪೋಷಕರು ಹಾಗೂ ಜನಪ್ರತಿನಿಧಿಗಳಿಂದ ಆಗಬೇಕು. ಸಮುದಾಯವೇ ಶಾಲೆಗಳನ್ನು ಬೆಳೆಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ನಟರಾಜ್ ಹೇಳಿದರು. ಎಂ. ಎನ್.ಕೋಟೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ವಾರ್ಷಿಕೋತ್ಸವದಲ್ಲಿ ಮಾತನಾಡಿ, ಖಾಸಗಿ ಶಾಲೆಯ ವ್ಯಾಮೋಹ ಈಗ ಗ್ರಾಮೀಣ ಭಾಗದಲ್ಲಿ ಹರಡಿ ಸರಕಾರಿ ಶಾಲೆಗಳು ಮಂಕಾಗಿವೆ. ಬಿಸಿಯೂಟ, ಹಾಲು, ರಾಗಿ ಅಂಬಲಿ, ಮೊಟ್ಟೆ, ಬಾಳೆಹಣ್ಣು ಹೀಗೆ ಅನೇಕ ಪೌಷ್ಟಿಕ ಆಹಾರ ನೀಡಲಾಗುತ್ತಿದೆ ಎಂದರು. ವೇದಿಕೆಯಲ್ಲಿ ಮುಖ್ಯ ಶಿಕ್ಷಕ ರಾಮಚಂದ್ರಪ್ಪ, ಗ್ರಾಪಂ ಪಿಡಿಒ ಕೃಷ್ಣಮೂರ್ತಿ, ಗ್ರಾಪಂ ಮಾಜಿ ಅಧ್ಯಕ್ಷ ಶಶಿಕಲಾ ಯೋಗೀಶ್, ಸದಸ್ಯರಾದ ದಿಲೀಪ್ ಕುಮಾರ್, ಸಿದ್ದಗಂಗಮ್ಮ ಕಲ್ಲೇಶ್, ಶೈಲಜಾ ಗಂಗಾಧರಸ್ವಾಮಿ, ಉಮಾ ತೇಜಣ್ಣ, ಮೋಹನ್, ಮುಖಂಡರಾದ ಮಾರುತಿಕುಮಾರ್, ಸುರೇಶ್ ಬಾಬು, ಸದಾಶಿವಯ್ಯ, ಸುಧಾಕರ್, ವಸಂತ್ ಕುಮಾರ್, ಕಿರಣ್ ಕುಮಾರ್ ಇದ್ದರು.

ಕಾಂಕ್ರೀಟ್ ರಸ್ತೆಗೆ ಎಸ್‌ಟಿಎಸ್ ಚಾಲನೆ

ಬೆಂಗಳೂರು ಉತ್ತರ: ಯಶವಂತಪುರ ವಿಧಾನಸಭಾ ಕ್ಷೇತ್ರ ಕೊಡಿಗೆಹಳ್ಳಿ ಗ್ರಾಮ ಪಂಚಾಯಿತಿಯ ಕೆ ಹೊಸಳ್ಳಿ ಮತ್ತು ಕೊಡಿಗೆಹಳ್ಳಿ ಹಾದು ಹೋಗುವ ಆಲದ ಮರ ರಸ್ತೆ ಮತ್ತು ಸಿಸಿ ಚರಂಡಿ ಹಾಗೂ ರಾಜ ಕಾಲುವೆ ಕಾಮಗಾರಿಗೆ ಯಶವಂತಪುರ ಶಾಸಕರಾದ ಎಸ್. ಟಿ. ಸೋಮಶೇಖರ್ ಗುದ್ದಲಿ ಪೂಜೆ ನಡೆಸುವ ಮೂಲಕ ಚಾಲನೆ ನೀಡಿದರು. ಕೊಡಿಗೆಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ವಿನೋದ ನರಸಿಂಹಮೂರ್ತಿ, ಮಾಜಿ ಅಧ್ಯಕ್ಷರು ಹಾಲಿ ಸದಸ್ಯ ಕೆ ಡಾ. ದೇವರಾಜ್, ಚಿಕ್ಕ ಕೋಡಿಗೆಹಳ್ಳಿ ನಾಗರಾಜು, ಪುರುಷೋತ್ತಮ್, ಪುಷ್ಪಲತಾ ಪುಟ್ಟರಾಜು, ಗಂಗರಾಜಮ್ಮ ಹಾಗೂ ಪಂಚಾಯತಿ ಸರ್ವ ಸದಸ್ಯರು ಹಾಜರಿದ್ದರು.

VISHWAVANI TV SPECIAL
ಯುಟ್ಯೂಬ್ ಚಾನೆಲ್ ಸಬ್‌ಸ್ಕ್ರೈಬ್ ಆಗಿ

{ಡಾ.ಎಂ.ಸಿ.ಸುಧಾಕರ್ } ಸಚಿವ

ಇತ್ತೀಚೆಗೆ ಗ್ರಾಮಾಂತರದ ತಂದೆ ತಾಯಂದಿರು ತಮ್ಮ ಮಕ್ಕಳಿಗೆ ಇಂಗ್ಲಿಷ್ ಮಾಧ್ಯಮ ಶಾಲೆಗಳಲ್ಲಿ ಓದಿಸಲು ಹೆಚ್ಚು ಆಸಕ್ತಿ ತೋರುತ್ತಿದ್ದಾರೆ. ಹೀಗಾಗಿ ಸರಕಾರ ಕೆಪಿಎಸ್ ಶಾಲೆಗಳಲ್ಲಿ ಇಂಗ್ಲಿಷ್ ಶಿಕ್ಷಣಕ್ಕೆ ಒತ್ತು ನೀಡಲಾಗಿದೆ. ಇದರ ಮಹತ್ವ ಅರಿತು ಶಿಕ್ಷಕರು ಮಕ್ಕಳೊಂದಿಗೆ ಇಂಗ್ಲಿಷ್‌ನಲ್ಲೇ ಮಾತನಾಡುವ ಮೂಲಕ ಮಕ್ಕಳಲ್ಲಿನ ಕೀಳರಿಮೆ ತೊಡೆಯಬೇಕು.

ಬಿಇಓ ಮತ್ತು ಶಿಕ್ಷಕರ ವಿರುದ್ಧ ಸಚಿವ ಡಾ.ಎಂ.ಸಿ.ಸುಧಾಕರ್ ಗರಂ

ಬೋಧನೆ ಉದಾಸೀನ ಸಹಿಸಲ್ಲ

ಚಿಂತಾಮಣಿ: ಕರ್ನಾಟಕ ಪಬ್ಲಿಕ್ ಶಾಲೆ ಸ್ಥಾಪನೆ ಮುಖ್ಯ ಉದ್ದೇಶವೇ ಗ್ರಾಮೀಣ ಭಾಗದ ಮಕ್ಕಳಿಗೆ ಗುಣಾತ್ಮಕ ಶಿಕ್ಷಣವನ್ನು ಕನ್ನಡ ಇಂಗ್ಲಿಷ್ ಭಾಷೆಗಳಲ್ಲಿ ನೀಡುವುದೇ ಆಗಿದೆ. ಶಿಕ್ಷಕರು ಆಯಾ ಮಾಧ್ಯಮದಲ್ಲಿ ಕಡ್ಡಾಯವಾಗಿ ಪಾಠಬೋಧನೆ ಮಾಡಬೇಕು ಎಂದು ಬಿಇಓ ಮತ್ತು ಶಿಕ್ಷಕರಿಗೆ ಸಚಿವ ಡಾ.ಎಂ.ಸಿ.ಸುಧಾಕರ್ ತಾಕೀತು ಮಾಡಿದರು.

ತಾಲೂಕಿನ ಕೈವಾರದಲ್ಲಿ 2 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಕರ್ನಾಟಕ ಪಬ್ಲಿಕ್ ಶಾಲೆಯ ಹೆಚ್ಚುವರಿ ಶಾಲಾ ಕೊಠಡಿಗಳ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಬಡವರಿಗೆ ತಮ್ಮ ಮಕ್ಕಳನ್ನು ದುಬಾರಿ ಶುಲ್ಕ ನೀಡಿ ಖಾಸಗಿ ಶಾಲೆಗಳಲ್ಲಿ ಇಂಗ್ಲಿಷ್ ಮೀಡಿಯಂಗೆ ಸೇರಿಸಲು ಆಗುತ್ತಿರಲಿಲ್ಲ. ಇದನ್ನು ಮನಗಂಡು ಸರಕಾರ ಕರ್ನಾಟಕ ಮಾದರಿ ಶಾಲೆಗಳನ್ನು ತೆರೆದು ಎಲ್ ಕೆಜಿಯಿಂದ ಹತ್ತನೇ ತರಗತಿವರೆಗೆ ಇಂಗ್ಲಿಷ್ ಮೀಡಿಯಂ ಶಿಕ್ಷಣ ನೀಡುತ್ತಿದೆ. ಕೆಪಿಎಸ್ ಶಾಲೆ ಬಂದ ನಂತರ ವಿದ್ಯಾರ್ಥಿಗಳು ಸರಕಾರಿ ಶಾಲೆಗಳಿಂದ ಹೊರಹೋಗದಂತೆ ತಡೆಯಲು ಸಹ ನೆರವಾಗಿದೆ. ಇಂತಹ ಶಾಲೆಗಳಲ್ಲಿ ಇಂಗ್ಲಿಷ್ ಮೀಡಿಯಂ ಬೋಧನೆ ಇಲ್ಲ ಎಂದರೆ ಏನರ್ಥ ಎಂದು ಪ್ರಶ್ನಿಸಿದರು. ಇತ್ತೀಚೆಗೆ ಗ್ರಾಮಾಂತರದಲ್ಲಿ ಕೂಡ ತಂದೆ ತಾಯಂದಿರು ತಮ್ಮ ಮಕ್ಕಳಿಗೆ ಇಂಗ್ಲೀಷ್ ಮಾಧ್ಯಮ ಶಾಲೆಗಳಲ್ಲಿ ಓದಿಸಲು ಹೆಚ್ಚು ಆಸಕ್ತಿ ತೋರುತ್ತಿರುವ ಹಿನ್ನೆಲೆಯಲ್ಲಿ ಕೆಪಿಎಸ್ ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಣಕ್ಕೆ ಒತ್ತು ನೀಡಲಾಗಿದೆ. ಇದರ ಮಹತ್ವ ಅರಿತು ಶಿಕ್ಷಕರು ಮಕ್ಕಳೊಂದಿಗೆ ಇಂಗ್ಲಿಷ್‌ನಲ್ಲೇ ಮಾತನಾಡುವ, ಪಾಠಮಾಡುವ ಮೂಲಕ ಮಕ್ಕಳ ಕೀಳರಿಮೆ ತೊಡೆಯಬೇಕು ಎಂದು ತಾಕೀತು ಮಾಡಿದರು. ದ್ವಿಭಾಷಾ ಕಲಿಕೆಗೆ ಉತ್ತೇಜನ ನೀಡುವ ಉದ್ದೇಶದಿಂದ ಕೆಪಿಎಸ್ ಶಾಲೆಗಳಲ್ಲಿ ಆಂಗ್ಲಭಾಷೆಯಲ್ಲಿ ಕಲಿಕೆಗೆ ಪ್ರೋತ್ಸಾಹ ನೀಡಲಾಗಿದೆ ಎಂಬ ಸತ್ಯ ಬಿಇಓ ಸೇರಿ ಎಲ್ಲಾ ಶಿಕ್ಷಕರಿಗೆ ಇರಬೇಕು ಎಂದು ಗುಡುಗಿದರು.

ಚಿಂತಾಮಣಿ ತಾಲೂಕಿನ ಕೈವಾರ ಕೆಪಿಎಸ್ ಶಾಲೆಗೆ ಭೇಟಿ ನೀಡಿದ್ದ ಜಿಲ್ಲಾ ಉಸ್ತುವಾರಿ ಸಚಿವರು ಮಕ್ಕಳೊಂದಿಗೆ ಸಂವಾದ ಮಾಡಿದರು.

ಮಕ್ಕಳೊಂದಿಗೆ ಇಂಗ್ಲಿಷ್ ಸಂಭಾಷಣೆ ಮಾಡಿ

ಕೆಪಿಎಸ್ ಶಾಲೆ ಶಿಕ್ಷಕರು ಆಂಗ್ಲಭಾಷೆಯಲ್ಲಿ ಮಕ್ಕಳೊಂದಿಗೆ ಸಂಭಾಷಣೆ ಮಾಡುತ್ತಿಲ್ಲ. ಉದಾಸೀನತೆ ಕರ್ತವ್ಯಲೋಪವಾಗಲಿದೆ. ಶಿಕ್ಷಕರೇ ಹೀಗೆ ಕಲಿಕೆಗೆ ನಿರಾಸಕ್ತಿ ತೋರುವುದು ಸರಿಯಲ್ಲ. ಸತ್ಯ ಹೀಗಿದ್ದಾಗ ಕೆಪಿಎಸ್ ಶಾಲೆಗಳ ಸ್ಥಾಪನೆಗೆ ಏನರ್ಥವಿದೆಯೆಂದು ಬಿಇಓ ಅವರನ್ನು ಸಚಿವರು ಪ್ರಶ್ನಿಸಿದರು.

ಕೈವಾರ ಹೋಬಳಿಯ ಕದಿರಾಪುರದಲ್ಲಿ ಪೂರ್ಣಗೊಂಡಿರುವ ರಸ್ತೆ ಕಾಮಗಾರಿ ಉದ್ಘಾಟನೆ, ಮಲ್ಲಿಕಾಪುರ ಗ್ರಾಮದಲ್ಲಿ ಶುದ್ಧಕುಡಿಯುವ ನೀರಿನ ಘಟಕದ ಕಾಮಗಾರಿಗೆ ಭೂಮಿಪೂಜೆ, ಮಡಬಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯ ಎರಡು ತರಗತಿ ಕೊಠಡಿಗಳ ಉದ್ಘಾಟನೆ, ನಾಯಿಂದ್ರಹಳ್ಳಿ ಶುದ್ಧಕುಡಿಯುವ ನೀರಿನ ಘಟಕಕ್ಕೆ ಭೂಮಿಪೂಜೆ, ಕೈವಾರದ ನಾಡ ಕಛೇರಿ ಉದ್ಘಾಟನೆ ಮಾಡಿದರು. ತಾಪಂ ಇಒ ಆನಂದ್, ಬಿಇಓ ಉಮಾದೇವಿ, ಅಕ್ಷರ ದಾಸೋಹ ಸುರೇಶ್, ಗ್ಯಾರಂಟಿ ತಾ.ಅಧ್ಯಕ್ಷ ಮುನಿನಾರಾಯಣಪ್ಪ, ಕೈವಾರ ಗ್ರಾಪಂ ಅಧ್ಯಕ್ಷೆ ಉಮಾದೇವಿ, ಸಂತೇಕಲ್ಲಹಳ್ಳಿ ಗೋವಿಂದಪ್ಪ, ಸಂತೇಕಲ್ಲಹಳ್ಳಿ ಮಹೇಶ್, ಕೈವಾರ ಸಾಮ್ರಾಟ್, ಗ್ರಾಮ ಪಂಚಾಯತಿ ಮಾಜಿ ಚಂದ್ರಪ್ಪ, ಟಿಎಪಿಎಂಎಸ್ ಮಾಜಿ ಉಪಾಧ್ಯಕ್ಷ ಬಾಲರಾಜ್, ಕೆಂಪದೇನಹಳ್ಳಿ ನಾಗೇಶ್, ಅಂಬರೀಶ್, ಬಳೇ ನಾಗರಾಜ್, ಮಂಜುನಾಥರೆಡ್ಡಿ, ತಳಗವಾರ ಪ್ರಕಾಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಾಬಾ ನಾಗರಾಜ್ ಉಪಸ್ಥಿತರಿದ್ದರು.

1 ವರ್ಷಕ್ಕೆ 1836 ಅಪಘಾತ | 51 ಕೋಟಿ ದಂಡ ಸಂಗ್ರಹ

ಜಿಲ್ಲೆಯಲ್ಲಿವೆ 41 ಅಪಘಾತ ತಾಣ

ರಂಗನಾಥ ಕೆ.ಹೊನ್ನಮರಡಿ, ತುಮಕೂರು:

ಜಿಲ್ಲೆಯಲ್ಲಿ 2024ರ ಜನವರಿಯಿಂದ ಡಿಸೆಂಬರ್‌ವರೆಗೆ 1836 ಅಪಘಾತಗಳು ಸಂಭವಿಸಿರುವುದು ಆತಂಕ ಮೂಡಿಸಿದೆ. ವಾಹನ ಸವಾರರು ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದರಿಂದ ರಸ್ತೆ ಅಪಘಾತಗಳನ್ನು ತಪ್ಪಿಸಬಹುದು. ಸಂಚಾರಿ ನಿಯಮ ಪಾಲಿಸದಿರುವುದು ಅವಾಂತರಗಳಿಗೆ ಆಹ್ವಾನ ನೀಡಿದಂತೆ. ಇತ್ತೀಚಿನ ದಿನಗಳಲ್ಲಿ ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸದಿರುವುದು, ಮೊಬೈಲ್‌ನಲ್ಲಿ ಮಾತನಾಡುತ್ತಾ ವಾಹನ ಚಾಲನೆ ಮಾಡುವುದು ಒಂದು ಫ್ಯಾಷನ್ ಆಗಿದೆ. ಇದರಿಂದ ರಸ್ತೆ ಅಪಘಾತಗಳ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ. ವಾಹನ ಚಾಲನೆ ಮಾಡುವಾಗ ಎಚ್ಚರಿಕೆ ವಹಿಸುವುದರಿಂದ ಸಂಭವಿಸಬಹುದಾದ ರಸ್ತೆ ಅಪಘಾತಗಳನ್ನು ತಪ್ಪಿಸಬಹುದು.

ಅಪಘಾತ ತಾಣಗಳು:

ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಗಳಲ್ಲಿ ನಿರಂತರವಾಗಿ ಅಪಘಾತ ಸಂಭವಿಸುವ 41 ಸ್ಥಳಗಳನ್ನು ಗುರುತಿಸಲಾಗಿದ್ದು, ಅಪಘಾತ ತಡೆಗೆ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ ಪ್ರತಿ ತಿಂಗಳು ಸಭೆ ನಡೆಸಲಾಗುತ್ತಿದೆ.

ಪೊಲೀಸ್ ಇಲಾಖೆಯಿಂದ ಜಿಲ್ಲೆಯಲ್ಲಿ ತುಮಕೂರು ಗ್ರಾಮಾಂತರ ವ್ಯಾಪ್ತಿಯ ಜೈನ್ ಪಬ್ಲಿಕ್ ಶಾಲೆ- ಊರುಕೆರೆ ಹಾಗೂ ಹೆಗ್ಗೆರೆ ಆರ್ಚ್-ಡೆಂಟಲ್ ಕಾಲೇಜು; ಕೋರಾ ವ್ಯಾಪ್ತಿ ನೆಲಹಾಳ್ ವೃತ್ತ ಹಾಗೂ ಅಜ್ಜಗೊಂಡನಹಳ್ಳಿ ವೃತ್ತ; ಕ್ಯಾತ್ಸಂದ್ರ ವ್ಯಾಪ್ತಿ ಚಿಕ್ಕಹಳ್ಳಿ, ಹಿರೇಹಳ್ಳಿ, ಪಂಡಿತನಹಳ್ಳಿಗೇಟ್, ಮಂಚಲಕುಪ್ಪೆ ಸರ್ಕಲ್; ಕುಣಿಗಲ್ ವ್ಯಾಪ್ತಿ ಅಂಚೆಪಾಳ್ಯ, ಬೇಗೂರು ಸೇತುವೆ, ಹೇರೂರು ಸೇತುವೆ, ಉರ್ಕೇನಹಳ್ಳಿ, ಕುರುಡಿಹಳ್ಳಿ; ಅಮೃತೂರು ವ್ಯಾಪ್ತಿ ನಾಗೇಗೌಡನಪಾಳ್ಯ ಗೇಟ್, ತಿಪ್ಪೂರು ಗೇಟ್, ಮಾಗಡಿಪಾಳ್ಯ ಗೇಟ್, ಹೇಮಾವತಿ ಕ್ರಾಸ್, ಚಾಕೇನಹಳ್ಳಿಗೇಟ್; ತುರುವೇಕೆರೆ ವ್ಯಾಪ್ತಿ ಜೋಡುಗಟ್ಟೆ; ಶಿರಾ ವ್ಯಾಪ್ತಿ ಶಿವಾಜಿ ನಗರ ಹಾಗೂ ಮಾನಂಗಿತಾಂಡ ಗೇಟ್; ಕಳ್ಳಂಬೆಳ್ಳ ವ್ಯಾಪ್ತಿ ಜೋಗಿಹಳ್ಳಿ, ದೊಡ್ಡಾಲದಮರ, ಬಾಳೇನಹಳ್ಳಿ ಗೇಟ್; ತಾವರೆಕೆರೆ ವ್ಯಾಪ್ತಿ ದ್ವಾರಾಳು ಸೇತುವೆ ಹಾಗೂ ತಾವರೆಕೆರೆ; ತಿಪಟೂರು ಪಟ್ಟಣ ವ್ಯಾಪ್ತಿ ಬಂಡಿಹಳ್ಳಿಗೇಟ್ -ರೇಣುಕಾ ಡಾಬ; ಹುಲಿಯೂರು ದುರ್ಗ ವ್ಯಾಪ್ತಿ ಡಿ.ಹೊಸಹಳ್ಳಿ-ಡಿ.ಹೊಸಹಳ್ಳಿ ಗೊಲ್ಲರಹಟ್ಟಿ, ಕೊಡವತ್ತಿ ಜಂಕ್ಷನ್, ಹಳೇವೂರು ಜಂಕ್ಷನ್, ಐಬಿ ಸರ್ಕಲ್; ಮಿಡಿಗೇಶಿ ವ್ಯಾಪ್ತಿ ಕೆರೆಗಳ ಪಾಳ್ಯ, ಬಸ್ ನಿಲ್ದಾಣ ಸುತ್ತಮುತ್ತ ಹಾಗೂ ಹೊಸಕೆರೆ; ಪಾವಗಡ ವ್ಯಾಪ್ತಿ ರಾಜವಂತಿ ಕೆರೆ, ನಾಗಲಮಡಿಕೆ ಕ್ರಾಸ್, ಪಳವಳ್ಳಿ ಕೆರೆ.

51 ಕೋಟಿ ರು. ದಂಡ ಸಂಗ್ರಹ

ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ 2024ರ ಜನವರಿ ಮಾಹೆಯಿಂದ ಡಿಸೆಂಬರ್‌ವರೆಗೆ ವಾಹನಗಳ ನೋಂದಣಿಗಾಗಿ 4,86,59,028, ಅರ್ಹತಾ ಪತ್ರಕ್ಕಾಗಿ 84,57,101 , ರಹದಾರಿ ಶುಲ್ಕ 48,83,306 ., ದಂಡ ಶುಲ್ಕವಾಗಿ 1,71,45,733., 5663 ಇಲಾಖಾ ಪ್ರಕರಣಗಳಿಂದ 2,38,07,893 ರೂ. ಸೇರಿ 54,09,53,061 ದಂಡ ಸಂಗ್ರಹಿಸಲಾಗಿದೆ.

ಇಂದಿನಿಂದ ಬಿಸಿಯೂಟ ನೌಕರರ ಪ್ರತಿಭಟನೆ

ಚಿಕ್ಕಬಳ್ಳಾಪುರ: ಇಂದಿನಿಂದ ಕೆಲಸವನ್ನು ಸ್ಥಗಿತಗೊಳಿಸಿರುವ ಬಿಸಿಯೂಟ ನೌಕರರರು ವೇತನ ಹೆಚ್ಚಳ ಸೇರಿ ನಾನಾ ಸೌಲತ್ತುಗಳಿಗೆ ಆಗ್ರಹಿಸಿ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ನೇತೃತ್ವದಲ್ಲಿ ಬೆಂಗಳೂರಿನ ಫ್ರೀಡಂಪಾರ್ಕಿನಲ್ಲಿ ಅಹೋರಾತ್ರಿ ಹೋರಾಟ ನಡೆಸುವುದಾಗಿ ಸಂಘದ ಜಿಲ್ಲಾ ಗೌರವಾಧ್ಯಕ್ಷ ಬಿ.ಎನ್.ಮುನಿಕೃಷ್ಣಪ್ಪ ತಿಳಿಸಿದರು.

ಸಿಪಿಎಂ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾ ಗೌರವಾಧ್ಯಕ್ಷ ಬಿ.ಎನ್. ಮುನಿಕೃಷ್ಣಪ್ಪ ಮಾತನಾಡಿದರು.

ನಗರದ ಸಿಪಿಎಂ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2010 ರಿಂದ ಈವರೆಗೆ ಕೇಂದ್ರ ಸರಕಾರ ನೌಕರರ ಗೌರವಧನ ಹೆಚ್ಚಿಸದೆ ನೌಕರರನ್ನು ಕಡೆಗಣಿಸಿದೆ. ಮಾಸಿಕ 26 ಸಾವಿರ ರೂ.ಗಳಿಗೆ ಗೌರವಧನ ನೀಡಬೇಕು, ರಾಜ್ಯ ಸರಕಾರ ಕೂಡ ಚುನಾವಣಾ ಪೂರ್ವದಲ್ಲಿ ನೀಡಿದ್ದ ಆಶ್ವಾಸನೆಯಂತೆ ವೇತನ ಹೆಚ್ಚಿಸಬೇಕೆಂದು ಆಗ್ರಹಿಸಿದರು.

ಈಗಾಗಲೇ ಹಣಕಾಸು ಇಲಾಖೆ ಒಪ್ಪಿಕೊಂಡಿರುವ ಹಾಗೆ ನಿವೃತ್ತಿಯಾದವರಿಗೆ ಇಡಿಗಂಟು ರೂಪದಲ್ಲಿ ನೀಡುವ ಹಣವನ್ನು ಕೂಡಲೇ ಜಾರಿಗೊಳಿಸಬೇಕು. ಸಾದಿಲ್ವಾರು ಜಂಟಿಖಾತೆ ಜವಾಬ್ದಾರಿಯನ್ನು ಮುಖ್ಯ ಅಡುಗೆ ನೌಕರರಿಂದ ಎಸ್‌ಡಿಎಂಸಿಗೆ ವರ್ಗಾವಣೆ ಮಾಡಿರುವ ಕ್ರಮ ವಾಪಾಸ್ಸಾಗಬೇಕು. ಸುಸಜ್ಜಿತ ಅಡುಗೆ ಕೇಂದ್ರಗಳನ್ನು ನಿರ್ಮಿಸಬೇಕು. ಉತ್ತರ ಪ್ರದೇಶ ಮತ್ತು ಪಂಜಾಬ್ ಹೈಕೋರ್ಟ್ ತೀರ್ಪಿನ ಪ್ರಕಾರ ಕನಿಷ್ಠ ಕೂಲಿ ವ್ಯವಸ್ಥೆ ಜಾರಿಗೊಳಿಸಬೇಕೆಂದು ಒತ್ತಾಯಿಸಿದರು.

ಬೇಡಿಕೆಗಳು:

ಅಕ್ಷರ ದಾಸೋಹ ಯೋಜನೆ ಶಿಕ್ಷಣ ಇಲಾಖೆಯಡಿ ನಡೆಸಬೇಕು. ಹಾಜರಾತಿ ಆಧಾರದಲ್ಲಿ ಕೆಲಸದಿಂದ ತೆಗೆಯುವ ಕ್ರಮನಿಲ್ಲಬೇಕು. ಬಿಸಿಯೂಟ ಯೋಜನೆ ಖಾಯಂ ಮಾಡಬೇಕು. ಶಾಲೆಗಳಲ್ಲಿ ಗ್ರೂಪ್ ಡಿ ನೌಕರರನ್ನು ನೇಮಿಸಬೇಕು. ಬೇಸಿಗೆ ಮತ್ತು ದಸರಾ ರಜೆಗಳ ವೇತನ ನೀಡಬೇಕು ಎಂಬ ಬೇಡಿಕೆಗಳನ್ನು ಈಡೇರಿಸಲು ಪ್ರತಿಭಟನೆ ನಡೆಸುತ್ತಿದ್ದೇವೆ ಎಂದರು. ಸಂಘದ ಜಿಲ್ಲಾ ಕಾರ್ಯದರ್ಶಿ ಕೆ.ಆರ್.ಮಂಜುಳ, ಖಜಾಂಚಿ ಭಾರತಿ, ಕೆ.ಎಂ.ಮಂಜುಳ, ಚನ್ನಮ್ಮ, ಎನ್. ಮಂಜುಳ, ಮಗ್ಡಲೀನ ಮೇರಿ, ಸಿಂಧೂಶ್ರೀ, ಶ್ರೀನಿವಾಸ್ ಇದ್ದರು.

ಜನಪರ ಸಂಘಟನೆಗಳಿಂದ ಸತ್ಯಾಗ್ರಹ

ಸಮತಾ ಸೈನಿಕ ದಳದ ರಾಜ್ಯ ಪ್ರಧಾನಕಾರ್ಯದರ್ಶಿ ಜಿ.ಸಿ.ವೆಂಕಟರವಣಪ್ಪ ಮಾತನಾಡಿದರು.

ಚಿಕ್ಕಬಳ್ಳಾಪುರ: ಪಂಚಮರ ಏಳಿಗೆಗಾಗಿ ಮೀಸಲಿಟ್ಟಿರುವ ಅನುದಾನವನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಬಳಸುತ್ತಿರುವ ಸರಕಾರದ ನಡೆಯನ್ನು ಖಂಡಿಸಿ ಬೆಂಗಳೂರಿನ ಫ್ರೀಡಂಪಾರ್ಕಿನಲ್ಲಿ ಮಾ.3 ರಿಂದ ಮಾ.7ರವರೆಗೆ 25ಕ್ಕೂ ಹೆಚ್ಚು ದಲಿತ ಹಾಗೂ ಜನಪರ ಸಂಘಟನೆಗಳಿಂದ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಸಮತಾ ಸೈನಿಕ ದಳದ ರಾಜ್ಯ ಪ್ರಧಾನಕಾರ್ಯದರ್ಶಿ ಜಿ.ಸಿ.ವೆಂಕಟರವಣಪ್ಪ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿ, ರಾಜ್ಯ ಸರ್ಕಾರ ದಲಿತರಿಗೆ ಮೀಸಲಿಟ್ಟಿದ್ದ ಅನುದಾನದಲ್ಲಿ 2023-24ರಲ್ಲಿ 11,144 ಕೋಟಿ, 2024-25ರಲ್ಲಿ 14,282 ಕೋಟಿ ಗ್ಯಾರಂಟಿಗಳಿಗೆ ಉಪಯೋಗಿಸಿಕೊಂಡಿದೆ. ಇದೀಗ 14,488 ಕೋಟಿಗಳ ದಲಿತರ ಹಣವನ್ನು ಗ್ಯಾರಂಟಿಗಳಿಗೆ ಉಪಯೋಗಿಸಲು ಮುಂದಾಗಿದೆ. ಇದು ದಲಿತರ ಮೀಸಲಾತಿಗೆ ಬಹುದೊಡ್ಡ ಕೊಡಲಿಪೆಟ್ಟಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕಳೆದೆರಡು ವರ್ಷಗಳಿಂದ ಬರೊಬ್ಬರಿ 25 ಸಾವಿರ ಕೋಟಿ ದಲಿತರ ಮೀಸಲಾತಿ ಹಣ ಗ್ಯಾರಂಟಿಗಳಿಗೆ ಉಪಯೋಗ ಮಾಡಿರುವ ಹಣ ಕೂಡಲೇ ಆಯಾ ಇಲಾಖೆಗಳಿಗೆ ವಾಪಸ್ ನೀಡಬೇಕು ಎಂದು ಆಗ್ರಹಿಸಿ ವಿವಿಧ ಸಂಘಟನೆಗಳಿಂದ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದರು.

ಮಾ.7ರಂದು ಮುಖ್ಯಮಂತ್ರಿ ಬಜೆಟ್ ಮಂಡಿಸಲಿದ್ದು, ಅಂದು ನಮ್ಮ ಬೇಡಿಕೆ ಈಡೇರಿಸಲು ಕ್ರಮ ಕೈಗೊಳ್ಳಬೇಕು. ಗ್ಯಾರಂಟಿಗಳಿಗೆ ಎಸ್‌ಸಿಪಿ ಎಸ್ಟಿಪಿ ಹಣ ಬಳಸದಿರುವ ನಿರ್ಧಾರ ಪ್ರಕಟಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಸಮತಾಸೈನಿಕ ದಳದ ಜಿಲ್ಲಾಧ್ಯಕ್ಷ ಜಿ. ಈಶ್ವರಪ್ಪ, ಉಪಾಧ್ಯಕ್ಷ ಜಿ.ಅಶ್ವತ್ಥಪ್ಪ, ವೆಂಕಟರೋಣಪ್ಪ ಮತ್ತಿತರರು ಇದ್ದರು.

ಡಿ ಗ್ರೂಪ್ ನೌಕರನಿಗೆ ಆತ್ಮೀಯ ಬೀಳ್ಕೊಡುಗೆ

ಬಾಗೇಪಲ್ಲಿ: ತಾವು ಮಾಡುವ ಕೆಲಸದ ಬಗ್ಗೆ ಶ್ರದ್ದೆ ಇದ್ದರೆ, ಸಮಾಜ ಅವರ ಕಾಯಕ, ನಿಷ್ಠೆ ಗುರುತಿಸುತ್ತದೆ ಎನ್ನುವುದಕ್ಕೆ ಘಂಟಂವಾರಿಪಲ್ಲಿ ಸರಕಾರಿ ಪ್ರೌಢಶಾಲೆಯ ಡಿ ಗ್ರೂಪ್ ನೌಕರ ರಾಮಚಂದ್ರಪ್ಪ ಅವರೇ ಸಾಕ್ಷಿ.

ಘಂಟಂವಾರಿಪಲ್ಲಿ ಪ್ರೌಢಶಾಲೆಯಲ್ಲಿ 10 ವರ್ಷಗಳಿಂದ ಗ್ರೂಪ್ 'ಡಿ' ನೌಕರರಾಗಿ ಸೇವೆ ಸಲ್ಲಿಸುತ್ತಿದ್ದ ರಾಮಚಂದ್ರಪ್ಪ ಅವರಿಗೆ ಸೇವಾ ಬಡ್ತಿ ದೊರೆತು ವರ್ಗಾವಣೆಯಾದ ಕಾರಣ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ದ್ವಿತೀಯ ದರ್ಜೆಯ ಸಹಾಯಕರಾಗಿ ಬಡ್ತಿ ಹೊಂದಿ ಮಾರ್ಗಾನುಕುಂಟೆ ಅಕ್ಕಮ್ಮ ಸಾಕಮ್ಮ ಸರಕಾರಿ ಪ್ರೌಢಶಾಲೆಗೆ ವರ್ಗಾವಣೆ ಗೊಂಡಿದ್ದಾರೆ. ಮುಖ್ಯ ಶಿಕ್ಷಕರು, ಶಿಕ್ಷಕ ವೃಂದವರು ಘಂಟಂವಾರಿಪಲ್ಲಿಯಿಂದ ಮಾರ್ಗಾನುಕುಂಟೆ ಪ್ರೌಢಶಾಲೆಗೆ ಹೋಗಿ ಬೀಳ್ಕೊಡಲಾಯಿತು.

ನೌಕರ ರಾಮಚಂದ್ರಪ್ಪ ಮಾತನಾಡಿ, ಈ ರೀತಿಯ ಬೀಳ್ಕೊಡುಗೆ ನನ್ನ ಪುಣ್ಯ ಎಂದು ಭಾವಿಸುತ್ತೇನೆ ಎಂದು ಭಾವುಕರಾಗಿ ನುಡಿದರು.

ಘಂಟಂವಾರಿಪಲ್ಲಿಡಿ ಗ್ರೂಪ್ ನೌಕರ ರಾಮಚಂದ್ರಪ್ಪ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ಮುಖ್ಯ ಶಿಕ್ಷಕಿ ಜಿ.ರಾಮಸುಬ್ಬಮ್ಮ, ಸಹ ಶಿಕ್ಷಕರಾದ ಎನ್.ಎನ್. ಸಂಧ್ಯಾ, ಸಿ.ನಾರಾಯಣ ಸ್ವಾಮಿ, ಎಲ್.ರವಿ, ಎಸ್.ವರಲಕ್ಷ್ಮೀ, ಕೆ.ಬಿ.ಆಂಜನೇಯ ರೆಡ್ಡಿ, ಜಿ.ವಿ.ಚಂದ್ರಶೇಖರ, ಉಷಾ ಇದ್ದರು.

ಇ- ಖಾತೆ ಅಭಿಯಾನಕ್ಕೆ ಕೈಜೋಡಿಸಿ



ಪಟ್ಟಣದಲ್ಲಿ ಇ-ಖಾತಾ ಅಭಿಯಾನಕ್ಕೆ ಶಾಸಕ ಎಸ್. ಎನ್.ಸುಬ್ಬಾರೆಡ್ಡಿ ಚಾಲನೆ ನೀಡಿ ಮಾತನಾಡಿದರು.

ಬಾಗೇಪಲ್ಲಿ: ಸಮರ್ಪಕ ದಾಖಲೆ ಇಲ್ಲದ ಆಸ್ತಿಗಳಿಗೆ ಬಿ- ಖಾತೆ ನೀಡುವ ಉದ್ದೇಶಕ್ಕೆ ಸರಕಾರ ಘೋಷಿಸಿರುವ ಇ-ಖಾತೆ ಅಭಿಯಾನ ಯಶಸ್ವಿಗೆ ಪುರಸಭೆ ಸಿಬ್ಬಂದಿ ಶ್ರಮಿಸಬೇಕು ಎಂದು ಶಾಸಕ ಎಸ್. ಎನ್.ಸುಬ್ಬಾರೆಡ್ಡಿ ಹೇಳಿದರು.

ಪಟ್ಟಣದ ಪುರಸಭೆಯ ಆವರಣದಲ್ಲಿ ಇಖಾತಾ ಅಭಿಯಾನಕ್ಕೆ ಭಾನುವಾರ ಚಾಲನೆ ನೀಡಿ ಅವರು ಮಾತನಾಡಿ, ನಿವೇಶನ, ವಸತಿ ಕಟ್ಟಡ, ವಾಣಿಜ್ಯ ಕಟ್ಟಡಗಳು, ಮನೆಯ ಆಸ್ತಿಗಳು ಹೊಂದಿರುವವರು ದಾಖಲೆ ಸಮೇತ ಪುರಸಭೆ ಕಚೇರಿಗೆ ತೆರಳಿ ಅರ್ಜಿ ಸಲ್ಲಿಸಿದರೆ ಕೂಡಲೇ ಇ-ಖಾತಾ ಮಾಡಿಕೊಡುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. . ಅರ್ಜಿ ಸಲ್ಲಿಸಿದ ಕೇವಲ15 ದಿನಗಳಲ್ಲಿ ಇ-ಖಾತೆ ಪಡೆದು ನಾಗರಿಕರು ಅದರ ಸದುಪಯೋಗ ಮಾಡಿಕೊಳ್ಳಿ ಎಂದು ತಿಳಿಸಿದರು. ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಬರುವ ಅನಧಿಕೃತ, ಕಂದಾಯ ವಿವಿಧ ವಾರ್ಡಗಳಲ್ಲಿ ಹಾಗೂ ಆಸ್ತಿಗಳಿಗೆ ಎಲ್ಲಾ ರೀತಿಯ ನಾಗರಿಕ ಸೌಲಭ್ಯಗಳನ್ನು ಒದಗಿಸಿದ್ದರೂ ಖಾತೆ ಇಲ್ಲದ ಕಾರಣಕ್ಕೆ ತೆರಿಗೆ ಸಂಗ್ರಹ ಆಗುತ್ತಿರಲಿಲ್ಲ. ಪುರಸಭೆ ವ್ಯಾಪ್ತಿಯಲ್ಲಿ ಅನಧಿಕೃತ ಬಡಾವಣೆಗಳು ಸಾವಿರಾರು ಸಂಖ್ಯೆಯಲ್ಲಿ ತಲೆ ಎತ್ತಿವೆ. ಅಭಿಯಾನದ ಮೂಲಕ ಆಸ್ತಿಗೆ ಅಧಿಕೃತ ದಾಖಲೆಯೊಂದು ಮಾಲೀಕರಿಗೆ ಸಿಕ್ಕಂತಾಗುತ್ತದೆ ಎಂದು ತಿಳಿಸಿದರು.

ಪುರಸಭೆಯ ಮುಖ್ಯಾಧಿಕಾರಿ ಶ್ರೀನಿವಾಸ್ ಮಾತನಾಡಿ, 550 ಮಂದಿ ಅರ್ಜಿಗಳನ್ನು ಪಡೆದುಕೊಂಡು ಹೋಗಿದ್ದಾರೆ. ಪ್ರಸ್ತುತ 80 ಅರ್ಜಿಗಳು ಒಂದೇ ದಿನ ಸಲ್ಲಿಕೆಯಾಗಿವೆ ಎಂದು ತಿಳಿಸಿದರು.

ಪುರಸಭೆ ಅಧ್ಯಕ್ಷ ಎ.ಶ್ರೀನಿವಾಸ್, ಉಪಾಧ್ಯಕ್ಷೆ ಸುಜಾತ ನರಸಿಂಹ ನಾಯ್ಡು, ಪುರಸಭೆ ಸದಸ್ಯರಾದ ಎ.ನಂಜುಂಡಪ್ಪ, ಜಬೀವುಲ್ಲಾ, ಸರೋಜ, ರೇಷ್ಮಾಬಾಬು, ಸುನಿತಾ, ಪದ್ಮಮಲ್ಲೇಶ್, ಸುಶೀಲಮ್ಮ, ಕರವೇ ಹರೀಶ್ ಸಿಬ್ಬಂದಿಗಳಾದ ಅತಾವುಲ್ಲಾ, ಕೃಷ್ಣಪ್ಪ ಇದ್ದರು.

ಕೋಲಾರ ತಾಲೂಕಿನ ಮುದುವಾಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹೊಸಹಳ್ಳಿಯಲ್ಲಿ ವಿದ್ಯುತ್ ಶಾರ್ಟ್ ಸರ್ಕಿಟ್‌ನಿಂದಾಗಿ ಮನೆ ಸುಟ್ಟಿದ್ದು ಈ ಸಂಬಂಧ ಪಿಡಿಒ ಮಧುಮತಿ ಅವರು 10 ಸಾವಿರ ರೂ. ಪರಿಹರದ ಚೆಕ್ ವಿತರಿಸಿದರು. ಗ್ರಾಮಪಂಚಾಯತಿ ಅಧ್ಯಕ್ಷ ಹರೀಶ್ ಬಾಬು, ಉಪಾಧ್ಯಕ್ಷೆ ಭಾಗ್ಯಮ್ಮ ಕೆಂಚಣ್ಣ, ಸದಸ್ಯೆ ಪ್ರತಿಮಾಪ್ರಕಾಶ್, ಕಾರ್ಯದರ್ಶಿ ಮಂಜುನಾಥ್ ಇದ್ದರು.

ಕಲ್ಲಂಗಡಿಗೆ ಕೃತಕ ಬಣ್ಣ ಮಾರಾಟ ಬಂದ್

ಕುಣಿಗಲ್: ಪಟ್ಟಣದಲ್ಲಿ ಮಾರಾಟವಾಗಿರುವ ಕಲ್ಲಂಗಡಿ ಹಣ್ಣಿನಲ್ಲಿ ಅಧಿಕ ಪ್ರಮಾಣದ ಕೆಂಪು ಬಣ್ಣ ಕಾಣಿಸಿಕೊಂಡಿದ್ದು ಸ್ಥಳೀಯ ನಿವಾಸಿ ಶಿವರಾಮ್ ಎಂಬುವರು ನೀಡಿದ ದೂರಿನ ಮೇಲೆ ಸ್ಥಳಕ್ಕೆ ಪುರಸಭಾ ಅಧಿಕಾರಿ ಹಾಗೂ ತಾಲೂಕು ವೈದ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ ಅಂಗಡಿಯನ್ನು ತಾತ್ಕಾಲಿಕವಾಗಿ ಬಂದ್ ಮಾಡಿದ್ದಾರೆ. ಗ್ರಾಹಕ ಶಿವರಾಮ್ ಪಟ್ಟಣದ ಮಹಾತ್ಮ ಗಾಂಧಿ ಕಾಲೇಜು ಬಳಿ ತಮಿಳುನಾಡು ಮೂಲದ ವ್ಯಕ್ತಿ ಮಾರುತ್ತಿದ್ದ ಕಲ್ಲಂಗಡಿ ಹಣ್ಣನ್ನು ಖರೀದಿ ಮಾಡಿದ್ದರು. ಮನೆಯಲ್ಲಿ ಹಣ್ಣನ್ನು ಕತ್ತರಿಸುವ ಸಂದರ್ಭದಲ್ಲಿ ತಮ್ಮಲ್ಲಿದ್ದ ಬಿಳಿಯ ಟಿಶ್ಯೂ ಪೇಪರನ್ನು ಹಣ್ಣಿನ ಮೇಲೆ ಇರಿಸಲಾಗಿದೆ.

ಬಿಳಿಯ ಟಿಶ್ಯೂ ಪೇಪರ್ ಕೆಂಪು ಬಣ್ಣಕ್ಕೆ ತಿರುಗಿದೆ. ಇದರಿಂದ ಅನುಮಾನಗೊಂಡು ಪುರಸಭಾ ಅಧಿಕಾರಿಗಳಿಗೆ ದೂರು ನೀಡಿದ್ದರು. ಪುರಸಭೆ ಆರೋಗ್ಯ ವಿಭಾಗದ ಅಧಿಕಾರಿಗಳಾದ ಶ್ರೀಕಾಂತ್ ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೂಡಲೇ ಅಂಗಡಿಯಲ್ಲಿರುವ ಕಲ್ಲಂಗಡಿ ಹಣ್ಣುಗಳನ್ನು ಮಾರಾಟ ಮಾಡದಂತೆ ಎಚ್ಚರಿಕೆ ನೀಡಿ ಮೇಲಧಿಕಾರಿಗಳಿಗೆ ವಿಷಯ ಮುಟ್ಟಿಸಿದರು. ಸ್ಥಳಕ್ಕೆ ಟಿಎಚ್‌ಒ ಮರಿಯಪ್ಪ ಸಹ ಪರಿಶೀಲನೆ ನಡೆಸಿದ್ದು ಮುಂದಿನ ಕ್ರಮ ಜರುಗಿಸುವುದಾಗಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಕಲ್ಲಂಗಡಿ ಹಣ್ಣಿನ ವ್ಯಾಪಾರಿಗಳ ಮೇಲೆ ಆಹಾರ ಸುರಕ್ಷಿತ ಇಲಾಖೆ ನಿಗಾವಹಿಸಬೇಕಾಗಿದೆ ಎಂದು ಗ್ರಾಹಕರು ಒತ್ತಾಯಿಸಿದ್ದಾರೆ.

ಶೋಷಿತ ವರ್ಗಗಳ ಪರ ಪಾಲನಹಳ್ಳಿ ಮಠ ಸೇವೆ

ರಾಮನಗರ: ಪಾಲನಹಳ್ಳಿ ಮಠ ಶೋಷಿತ ವರ್ಗಗಳ ಪರವಾಗಿ ಕಾರ್ಯ ನಿರ್ವಹಿಸುತ್ತಿದ್ದು ಎಲ್ಲಾ ಧರ್ಮಗಳ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಈ ಮಠಕ್ಕೆ ನಮ್ಮ ಸರಕಾರದ ವತಿಯಿಂದ ಎಲ್ಲಾ ರೀತಿಯ ಸಹಕಾರವನ್ನು ಕಲ್ಪಿಸಲು ಸಿದ್ದರಿದ್ದೇವೆ ಎಂದು ಆಹಾರ ಸಚಿವ ಕೆ. ಎಚ್. ಮುನಿಯಪ್ಪ ಹೇಳಿದರು.

ಶ್ರೀಶನೈಶ್ಚರಸ್ವಾಮಿ ಕ್ಷೇತ್ರದ ಜಾತ್ರ ಮಹೋತ್ಸವ ಹಾಗೂ ಶಿವರಾತ್ರಿ ಉತ್ಸವ, ಮಹಾ ರುದ್ರಯಾಗ ಸಮಾರಂಭದಲ್ಲಿ ಮಾತನಾಡಿದರು. ಶ್ರೀಮಠ ಚಿಕ್ಕದಾಗಿ ಪ್ರಾರಂಭವಾಗಿದ್ದು ಈಗ ಬಹಳ ದೊಡ್ಡ ಮಠವಾಗಿ ಹಬ್ಬಿದೆ, ರಾಜ್ಯದಲ್ಲಿ ಸುಮಾರು 10 ಶೋಷಿತ ವರ್ಗಗಳ ಮಠಗಳಿದ್ದು ಎಲ್ಲಾ ಮಠಗಳೂ ಶಿಕ್ಷಣ ದಾಸೋಹದೊಂದಿಗೆ ಶ್ರಮಿಸುತ್ತಿವೆ. ನಮ್ಮ ಸರಕಾರ ಈ ಮಠಗಳೊಂದಿಗೆ ಸದಾ ಇರುತ್ತದೆ ಎಂದರು.

ಪಾಲನಹಳ್ಳಿ ಮಠದಲ್ಲಿ 4 ದಿನಗಳಿಂದ ನಡೆಯುತ್ತಿರುವ ಜಾತ್ರಾ ಮಹೋತ್ಸವದಲ್ಲಿ ಉಪ ಮುಖ್ಯಮಂತ್ರಿ ಹಾಗೂ ನಮಗೆ ರಜತ ಕಿರೀಟವನ್ನು ತೊಡಿಸುವುದರ ಮೂಲಕ ಗೌರವವನ್ನು ಸಲ್ಲಿಸಿರುವುದು ಸಂತಸ ತಂದಿದೆ ಎಂದರು.

ಪಾಲನಹಳ್ಳಿ ಮಠದಲ್ಲಿ ನಡೆದ ಮಹಾ ರುದ್ರಯಾಗ ಸಮಾರಂಭದಲ್ಲಿ ಸಚಿವ ಕೆ. ಎಚ್. ಮುನಿಯಪ್ಪ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್, ಶಾಸಕರಾದ ಶ್ರೀನಿವಾಸ್, ಪಾಲನಹಳ್ಳಿ ಮಠದ ಸಂಸ್ಥಾಪಕ ಅಧ್ಯಕ್ಷ ಶ್ರೀ ಸಿದ್ಧರಾಜು ಸ್ವಾಮೀಜಿ, ಶ್ರೀರೇಣುಕಾಶಿವಾಚಾರ್ಯ ಸ್ವಾಮಿ, ಶ್ರೀ ಮಾದಾರ ಚನ್ನಯ್ಯ ಸ್ವಾಮಿ, ಶ್ರೀ ಶಿವಾಚಾರ್ಯ ಸ್ವಾಮಿ, ಶ್ರೀ ರಾಜಶೇಖರ ಸ್ವಾಮಿ, ಶ್ರೀಪಾಪಣ್ಣ ಸ್ವಾಮೀಜಿ, ಚಿತ್ರನಟ ಧ್ರುವ ಸರ್ಜಾ ಉಪಸ್ಥಿತರಿದ್ದರು.

ಬಸ್ ತಂಗುದಾಣ ಲೋಕಾರ್ಪಣೆ

ಹಾಸನ: ನಗರದ ವಿದ್ಯಾನಗರ ಬಡಾವಣೆಯ ಕುವೆಂಪು ರಸ್ತೆಯಲ್ಲಿ ನೂತನವಾಗಿ ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಡಿ ನಿರ್ಮಿಸಲಾಗಿರುವ ವಿನೂತನ ಮಾದರಿಯ ಬಸ್ ತಂಗುದಾಣವನ್ನು ಶಾಸಕ ಎಚ್.ಪಿ ಸ್ವರೂಪ್ ಲೋಕಾರ್ಪಣೆ ಮಾಡಿದರು. ನಂತರ ಮಾತನಾಡಿದ ಅವರು, ಸಮಾಜಕ್ಕೆ ಒಳಿತಾಗುವ ಕೆಲಸ ಮಾಡಿದರೆ ಸಮಾಜ ನಮ್ಮನ್ನು ಪುರಸ್ಕರಿಸುತ್ತದೆ ಎಂದರು. ನಾವು ಸಾಮಾಜಿಕ ಕಾರ್ಯಗಳನ್ನು ಮಾಡುವುದರ ಜತೆ ಜತೆಗೆ ಕಿರಿಯರನ್ನು ಅದರಲ್ಲಿ ತೊಡಗಿಸಿಕೊಳ್ಳುವಂತೆ ಮಾಡುವುದು ಅತಿ ಮುಖ್ಯವಾಗಿದೆ. ಇಲ್ಲವಾದಲ್ಲಿ ಇಂದಿನವರಿಗೆ ಅರಿವು ಮೂಡಿಸುವಲ್ಲಿ ನಾವು ಸೋತಂತಾಗುತ್ತದೆ ಎಂದು ತಿಳಿಸಿದರು. ಬಸ್ ತಂಗುದಾಣ ವಿಭಿನ್ನ ಮಾದರಿಯಲ್ಲಿ ನಿರ್ಮಾಣವಾಗಿದ್ದು, ಸಂಪೂರ್ಣ ಕನ್ನಡ ಭಾಷೆಗೆ. ಆದ್ಯತೆ ನೀಡಲಾಗಿದೆ. ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಕವಿ ಕುವೆಂಪು ಹೆಸರಿಡಲಾಗಿದೆ. ಇದನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ಮನವಿ ಮಾಡಿದರು. ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್ ಬೊಮ್ಮೇಗೌಡ ಮಾತನಾಡಿ, ವಿದ್ಯಾನಗರ ಬಡಾವಣೆಯ ಕುವೆಂಪು ಯುವಕರ ಸಂಘ ನಾಡು-ನುಡಿಯ ಸೇವೆಗಾಗಿ ಈ ಹಿಂದಿನಿಂದಲೂ ಹಲವು ವಿಭಿನ್ನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದ್ದು, ಮತ್ತಷ್ಟು ಕೆಲಸ ಮಾಡಲು ಒಗ್ಗೂಡಲಿ ಎಂಬ ಆಶಯ ವ್ಯಕ್ತಪಡಿಸಿದರು.

ಸಮಾಚಾರ ಸಣ್ಣದಲ್ಲ

ಪತ್ನಿಯನ್ನು ಕೊಂದ ಪತಿ ಪೊಲೀಸರಿಗೆ ಶರಣು

ತುಮಕೂರು: ಶೀಲಶಂಕಿಸಿ 8 ತಿಂಗಳ ಗರ್ಭಿಣಿಯನ್ನು 8 ವರ್ಷದ ಮಗನ ಕಣ್ಣೆದುರೇ ನೇಣು ಬಿಗಿದು ಕೊಲೆ ಮಾಡಿ ಬಳಿಕ ಪತಿ ಠಾಣೆಗೆ ಹೋಗಿ ಶರಣಾದ ಘಟನೆ ತಿಲಕ್ ಪಾರ್ಕ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಕೊಲೆಯಾದ ಗರ್ಭಿಣಿ ನಗ್ಮಾ, ಪತಿ ಸೈಯದ್ ಎಂದು ತಿಳಿದುಬಂದಿದೆ. ಒಂದು ವರ್ಷದ ಹಿಂದೆ ನಗ್ಮಾ ಮೊದಲ ಗಂಡನನ್ನು ಬಿಟ್ಟು ಸೈಯದ್‌ನನ್ನು ಪ್ರೀತಿಸಿ ಎರಡನೇ ಮದುವೆಯಾಗಿದ್ದಳು. ಆದರೆ ಪತ್ನಿಯ ಶೀಲ ಶಂಕಿಸಿ ಕಿರುಕುಳ ನೀಡುತ್ತಿದ್ದ. ಹಣಕ್ಕಾಗಿ ಪೀಡಿಸಿ ಹಲ್ಲೆ ನಡೆಸುತ್ತಿದ್ದ ಎನ್ನಲಾಗಿದೆ. ಇದೇ ವಿಚಾರಕ್ಕೆ ಗಲಾಟೆ ನಡೆದು ಪತ್ನಿ ಬಾಯಿಗೆ ಬಟ್ಟೆ ತುರುಕಿ ನೇಣು ಬಿಗಿದು ಕೊಲೆಗೈದು ನೇರವಾಗಿ ಪೊಲೀಸ್ ಠಾಣೆಗೆ ಹೋಗಿ ಶರಣಾಗಿದ್ದಾನೆ.

ಸಚಿವರ ಹೇಳಿಕೆ: ಡಿಕೆಶಿ ವಿಚಲಿತ

ಉಡುಪಿ: ಕಾಂಗ್ರೆಸ್ ಪಕ್ಷದ ಗೊಂದಲ, ಮುಖ್ಯಮಂತ್ರಿ ಆಗಬೇಕು ಎಂಬ ಆಸೆ ಮತ್ತು ದಿನನಿತ್ಯ ಕೆ. ಎನ್. ರಾಜಣ್ಣ ಸೇರಿದಂತೆ ಅನೇಕ ಸಚಿವರು ಅವರ ವಿರುದ್ಧ ಹೇಳಿಕೆ ನೀಡುತ್ತಿರುವುದು ಡಿ.ಕೆ. ಶಿವಕುಮಾರ್ ಅವರನ್ನು ವಿಚಲಿತರನ್ನಾಗಿ ಮಾಡಿದೆ. ಹೀಗಾಗಿ ಅವರು ಹತಾಶರಾಗಿ ಈ ರೀತಿ ನಡೆದುಕೊಳ್ಳುತ್ತಿದ್ದಾರೆ. ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು. ಡಿಸಿಎಂ ಡಿ.ಕೆ. ಶಿವಕುಮಾರ್ 16ನೇ ಅಂತಾರಾಷ್ಟ್ರೀಯ ಚಲನ ಚಿತ್ರೋತ್ಸವ ಉದ್ಘಾಟನಾ ಸಮಾರಂಭದಲ್ಲಿ ನೀಡಿದ ನಟ್ -ಬೋಲ್ಟ್ ರಿಪೇರಿ ಮಾಡಿಸುತ್ತೇವೆ ಎಂಬ ಹೇಳಿಕೆ ಬಗ್ಗೆ ಕಾಪುವಿನಲ್ಲಿ ಪ್ರತಿಕ್ರಿಯಿಸಿದ ವಿಜಯೇಂದ್ರ, ಬೇರೆಯವರಿಗೆ ಹೇಳೋಕೆ ಆಗದೇ ಸಿನಿಮಾ ಉದ್ಯಮದವರ ಮೇಲೆ ಸಿಟ್ಟು ತೀರಿಸಿಕೊಳ್ಳುತ್ತಿದ್ದಾರೆ ಎಂದರು.

ಅರ್ಜುನ್ ಜನ್ಯ ಸಂಗೀತಕ್ಕೆ ಯುವಜನರಿಂದ ಭರ್ಜರಿ ಸ್ಪಂದನೆ | ಹತ್ತಾರು ಹಾಡುಗಳಿಂದ ಎಲ್ಲರ ಮನ ರಂಜಿಸಿದ ಜನ್ಯ ತಂಡ

ನಾಡಿನ ಕಲೆ-ಸಂಸ್ಕೃತಿ ಮೇಳೈಸಿದ ಹಂಪಿ ಉತ್ಸವಕ್ಕೆ ತೆರೆ

ಹಂಪಿ: ಹಂಪಿ ಉತ್ಸವದಲ್ಲಿ ತಡರಾತ್ರಿವರೆಗೂ ನಡೆದ ರಸಮಂಜರಿ ಕಾರ್ಯಕ್ರಮದಲ್ಲಿ ನೆರೆದಿದ್ದ ಜನರು ಹುಚ್ಚೆದ್ದು ಕುಣಿದರು.

ಖ್ಯಾತ ಸಂಗೀತ ನಿರ್ದೇಶಕ ಅರ್ಜುನ ಜನ್ಯ ಅವ ರನ್ನು ಕಂಡು ಕೇಕೆ, ಶಿಳ್ಳೆಗಳಿಂದ ಸ್ವಾಗತಿಸಿತು. ಶನಿ ವಾರ ಮಧ್ಯರಾತ್ರಿ ಹಂಪಿ ಉತ್ಸವಕ್ಕೆ ಈ ರೀತಿಯಲ್ಲಿ 'ಎ.ಜೆ' ಸಂಗೀತ ತಂಡ ಭರ್ಜರಿ ಪ್ರವೇಶ ನೀಡಿತು. ಜನ್ಯ ಕೀಬೋರ್ಡ್ ನುಡಿಸುತ್ತಲೇ ಇದ್ದಾಗ ಹತ್ತು ನಿಮಿಷ ವಿವಿಧ ಗೀತೆಗಳನ್ನು ಹಾಡುತ್ತಾ ಬಂದ ಹಲವು ಹೊಸ ಗಾಯಕರು, ನುರಿತ ವಾದಕರ ತಂಡವನ್ನು ಸ್ವಾಗತಿ ಸಲಾಯಿತು. ಇದೊಂದು ಹೊಸ ಅನುಭವವಾಗಿತ್ತು.

ಹುಚ್ಚೆದ್ದು ಕುಣಿದ ಯುವಜನತೆ: 'ನೀ ಸಿಗೋ ವರೆಗೂ, ನಗೋ ವರೆಗೂ ಕಾದಿರುವೆ ಗೆಳತಿಯೇ' ಎಂದು ಯುಗಳ ಗೀತೆ ಶುರು ಮಾಡಿದಾಗ ಯುವಕರು, ಯುವತಿಯರು ಹುಚ್ಚೆದ್ದು ಕುಣಿದರು. ಜೈಜೈಜೈ ಭಜರಂಗಿ ಹಾಡುತ್ತಾ ಡ್ರಮ್ಸ್ ಬಡಿದು ಪ್ರೇಕ್ಷಕರ ಎದೆಬಡಿತ ಹೆಚ್ಚಿಸಿದರು. ಹಿಂದೆ ಗದೆ ಹಿಡಿದು ಹೆಜ್ಜೆ ಹಾಕಿದ ನೃತ್ಯಗಾರರು ಮೆರುಗು ನೀಡಿದರು.

ಹಂಪಿ ಉತ್ಸವದ ಪ್ರಧಾನ ವೇದಿಕೆಯಲ್ಲಿ ಗಾಯಕ ಅರ್ಜುನ ಜನ್ಯ ಅವರಿಂದ ಶನಿವಾರ ತಡರಾತ್ರಿವರೆಗೆ ನಡೆದ ಗಾಯನಕ್ಕೆ ನೆರೆದಿದ್ದ ಜನರು ಹುಚ್ಚೆದ್ದು ಕುಣಿದರು.

ವೈಭವದ ತೆರೆ

ನಾಡಿನ ಕಲೆ-ಸಂಸ್ಕೃತಿಗಳನ್ನು ಅನಾವರಣಗೊಳಿಸಿದ ಹಂಪಿ ಉತ್ಸವಕ್ಕೆ ಭಾನುವಾರ ತೆರೆಬಿದ್ದಿದೆ. ದೇಶ-ವಿದೇಶಗಳ ಅಪಾರ ಸಂಖ್ಯೆಯ ಪ್ರವಾಸಿಗರು ಪಾಲ್ಗೊಂಡು ವಿಜಯ ನಗರ ಸಾಮ್ರಾಜ್ಯದ ಶ್ರೀಮಂತ ಕಲೆಗಳಿಗೆ ಮಾರುಹೋದರು.

'ಹೇ ಹುಡುಗಿ ಯಾಕಿಂಗ್ ಮಾಡ್ತಿ, ವರ್ಷಾಯ್ತು ಸಿಗುಲ್ಲ ಕೈಗೆ' ಗೀತೆಯಲ್ಲಿ ಮೋಡಿ ಮಾಡಿದ ಜನ್ಯ ಅವರು ಎಲ್ಲರೂ ಎದ್ದುನಿಂತ ಕುಣಿಯುವಂತೆ ಮಾಡಿಬಿಟ್ಟರು. ಮಾಸ್ಟರ್ ಆನಂದ ರಚಿಸಿದ 'ನನ್ನಲ್ಲೊಂದು, ನಿನ್ನಲ್ಲೊಂದು, ಏನೊಂದು ಗುಟ್ಟು ಇದೆ' ಸಾಹಿತ್ಯವನ್ನು ಓದಿ ಹೇಳಿದರು, ಅದಕ್ಕೆ ಸ್ಥಳದಲ್ಲೇ ಜನ್ಯ ಅವರು ರಾಗ ಸಂಯೋಜಿಸಿದ ತಂಡದೊಟ್ಟಿಗೆ ಹಾಡಿಸಿದ್ದಕ್ಕೆ ಸಭಿಕರು ಹುಬ್ಬೇರಿಸಿದರು. 'ಬಾನ ದಾರಿಯಲ್ಲಿ ಸೂರ್ಯ ಜಾರಿ ಹೋದ' 'ಬೊಂಬೆ ಹೇಳುತೈತಿ' ಗೀತೆಗಳ ಮೂಲಕ ನಟ ಪುನೀತ್ ಅವರನ್ನು ಸ್ಮರಿಸುವುದನ್ನು ಮರೆಯಲಿಲ್ಲ.

'ಯಾಕೋ ಹುಡುಗ ಮೈಯಾಗ ಹೆಂಗೈತಿ' ಗೀತೆಗೆ ಪ್ರೇಕ್ಷಕರು ಕೋರಸ್ ಹಾಡಿದರು. ಜಸ್ಕರಣ್ ಅವರ ಕಂಠಸಿರಿಯಲ್ಲಿ ಹೊರಹೊಮ್ಮಿದ 'ಜೀವದ ಗೆಳತಿಯೇ' ಹಾಡು ಚಳಿ ಮರೆಸಿತು. ಸರಿಗಮಪ ಖ್ಯಾತಿಯ ಕೀರ್ತನ್ ಹೊಳ್ಳ, ಗಾಯಕ ಸುನೀಲ್ ಸೇರಿದಂತೆ ಹಲವು ಗಾಯಕರು ಹಂಪಿ ಉತ್ಸವ ಮುಖ್ಯ ವೇದಿಕೆಯಲ್ಲಿ ತಮ್ಮ ಪ್ರತಿಭೆ ಪ್ರಸ್ತುತ ಪಡಿಸಿದರು.

